# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 66 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 25–09–2024 ಬುಧವಾರ | ಪುಟ: 4 | ಬೆಲೆ : ರೂ.2–00

Volume - 02 Issue - 66 | RNI No: KARKAN/2023/88462 | Chitradurga | Date: 25-09-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಪಾತ್ರ ಹಿರಿದು: ನ್ಯಾಯಾಧೀಶ ಎಂ.ವಿಜಯ್ 2

ಜಿಲ್ಲೆಯ ಎಲ್ಲ ಪ್ರವಾಸಿ ತಾಣಗಳ ಸ್ವಚ್ಛತೆ: ಎಡಿಸಿ ಬಿ.ಟಿ. ಕುಮಾರಸ್ವಾಮಿ 3

ಮೀಸಲಾತಿ, ರೋಸ್ಟರ್ ನಿಯಮ ಸಡಿಲಿಕೆಗೆ ಸರ್ಕಾರಕ್ಕೆ ಮನವಿ: ಜಿ.ಎಸ್.ಮಂಜುನಾಥ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಎಂಆರ್‌ಐ ಸ್ಕ್ಯಾನಿಂಗ್ ಸೇವೆ ಸ್ಥಗಿತ

» ಚಿತ್ರದುರ್ಗ

ಇದೇ ಸೆಪ್ಟೆಂಬರ್ 24 ರಿಂದ ಜಿಲ್ಲಾ ಆಸ್ಪತ್ರೆಯಲ್ಲಿ ಎಂ.ಆರ್.ಐ ಸ್ಕ್ಯಾನಿಂಗ್ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವುದಾಗಿ ಜಿಲ್ಲಾ ಆಸ್ಪತ್ರೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎಸ್.ಪಿ. ರವೀಂದ್ರ ಅವರು ತಿಳಿಸಿದ್ದಾರೆ. ಎಂ.ಆರ್.ಐ ಸ್ಕ್ಯಾನಿಂಗ್ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವುದಾಗಿ KRSNAA DIAGNOSTICS LTD ಅವರು ಪತ್ರ ಮುಖೇನ ಮಾಹಿತಿ ನೀಡಿರುತ್ತಾರೆ. ಹೀಗಾಗಿ ಸಾರ್ವಜನಿಕರು ಮತ್ತು ರೋಗಿಗಳು ಸಹಕರಿಸಬೇಕು ಎಂದು ಜಿಲ್ಲಾ ಆಸ್ಪತ್ರೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಸ್ಪಷ್ಟೀಕರಣ

» ಚಿತ್ರದುರ್ಗ

ಕಳೆದ ಸೆ.20 ರಂದು ಸಂಸದರಾದ ಗೋವಿಂದ ಕಾರಜೋಳ ಅವರು ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದ ಸಂದರ್ಭದಲ್ಲಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಗೈರು ಹಾಜರಿಯಾಗಿದ್ದರು ಎಂದು ಕೆಲ ದಿನಪತ್ರಿಕೆಗಳಲ್ಲಿ ವರದಿ ಪ್ರಕಟವಾಗಿರುತ್ತದೆ. ಆದರೆ ಕೆ.ಎಂ.ಇ.ಆರ್.ಸಿ ಅಭಿವೃದ್ಧಿ ಆಯುಕ್ತರು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅವರ ಅಧ್ಯಕ್ಷೆಯಲ್ಲಿ ಸೆ.20 ರಂದು ಬೆಂಗಳೂರಿನ ವಿಕಾಸ ಸೌಧದಲ್ಲಿ ಜರುಗಿದ ಗಣಿಬಾಧಿತ ಜಿಲ್ಲೆಗಳಲ್ಲಿ ಸರ್ವೋಚ್ಛ ನ್ಯಾಯಾಲಯದ ಆದೇಶದನ್ವಯ ಸಿಇಪಿಎಂಐಝಡ್ ಸಭೆಯಲ್ಲಿ ಭಾಗವಹಿಸಲು, ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆದು ಸಭೆಗೆ ಹಾಜರಾಗಲಾಗಿತ್ತು. ಅದೇ ದಿನದಂದು ಸಂಸದರಾದ ಗೋವಿಂದ ಕಾರಜೋಳ ಅವರು ಜಿಲ್ಲಾಸ್ಪತ್ರೆಗೆ ಭೇಟಿ ನೀಡಿರುತ್ತಾರೆ ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವಿಂದ್ರ.ಎಸ್.ಪಿ ಸ್ಪಷ್ಟೀಕರಣ ನೀಡಿದ್ದಾರೆ. ಡಾ.ರವಿಂದ್ರ.ಎಸ್.ಪಿ ಅನುಪಸ್ಥಿತಿಯಲ್ಲಿ ಸೆ.20 ರಂದು ನಿವಾಸಿ ವೈದ್ಯಾಧಿಕಾರಿ ಡಾ.ಜಿ.ಆನಂದ್ ಪ್ರಕಾಶ್ ಜಿಲ್ಲಾ ಆಸ್ಪತ್ರೆಯ ದೈನಂದಿನ ಕರ್ತವ್ಯ ನಿರ್ವಹಿಸಿದ್ದಾರೆ.

### ಜಿಲ್ಲಾ ಆಯುಷ್ ಕಚೇರಿ ಸ್ಥಳಾಂತರ

» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಜಿಲ್ಲಾ ಆಯುಷ್ ಕಚೇರಿಯನ್ನು ಸೆ.05ರಂದು ನಗರದ ಹಳೇ ಕೆ.ಎಸ್.ಆರ್.ಟಿ.ಸಿ ಡಿಪೋ ರಸ್ತೆ, ಹೆಚ್.ಎಂ.ಟಿ ಕಾಂಪೌಂಡ್, ಚರ್ಚ್ ಬಡಾವಣೆಯಲ್ಲಿನ ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. ಆಯುಷ್ ಕಚೇರಿಗೆ ಸಂಬಂಧಿಸಿದ ಯಾವುದೇ ಪತ್ರ ವ್ಯವಹಾರಗಳು ಮತ್ತು ಕಚೇರಿ ಕೆಲಸಗಳು, ಇಲಾಖಾ ಕಾರ್ಯಕ್ರಮಗಳ ಮಾಹಿತಿಗಾಗಿ ಇಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಆಯುಷ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅ.3 ರಿಂದ 11ರವರೆಗೆ ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ

» ಚಿತ್ರದುರ್ಗ

ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ದಸರಾ ಉತ್ಸವ ಸಮಿತಿ ಸಂಯುಕ್ತಾಶ್ರಯದಲ್ಲಿ ಜಗತ್ ಪ್ರಸಿದ್ಧ ಮೈಸೂರು ದಸರಾ ಉತ್ಸವದಲ್ಲಿ ಅ.03 ರಿಂದ 11 ರವರೆಗೆ "ಮೈಸೂರು ದಸರಾ ಕನ್ನಡ ಪುಸ್ತಕ ಮಾರಾಟ ಮೇಳ–2024" ವನ್ನು ಮೈಸೂರಿನ ಸ್ಕೌಟ್ಸ್ ಮತ್ತು ಗೈಡ್ಸ್ ಮೈದಾನ, ಹಳೆ ಡಿಸಿ ಕಚೇರಿ ಎದುರು ಏರ್ಪಡಿಸಲಾಗಿದೆ. ಈ ಮೇಳದಲ್ಲಿ ಕನ್ನಡ ಪ್ರಕಾಶಕರು, ಮಾರಾಟಗಾರರು ಭಾಗವಹಿಸಬಹುದಾಗಿದ್ದು, ಮಳಿಗೆಯೊಂದಕ್ಕೆ ಕನ್ನಡ ಪುಸ್ತಕ ಪ್ರಾಧಿಕಾರ ಆಡಳಿತಾಧಿಕಾರಿಗಳ ಹೆಸರಿನಲ್ಲಿ ರೂ.1000 ಗಳನ್ನು ಭದ್ರತಾ ಠೇವಣಿ ಸಲ್ಲಿಸಬೇಕು. ಭಾಗವಹಿಸಲು ಇಚ್ಛಿಸುವ ಪ್ರಕಾಶಕರು, ಮಾರಾಟಗಾರರು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ ಬೆಂಗಳೂರು ಕಚೇರಿ ಅಥವಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿಗಳಲ್ಲಿ ಅಥವಾ ಪ್ರಾಧಿಕಾರದ ವೆಬ್‌ಸೈಟ್ https://kpp.karnataka.gov.in ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದು.

### ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಆಚರಣೆ: ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಚಾಲನೆ

# ಐತಿಹಾಸಿಕ ಕೋಟೆಯಲ್ಲಿ ಸ್ವಚ್ಛತಾ ಕಾರ್ಯ

» ಚಿತ್ರದುರ್ಗ






ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನದ ಅಂಗವಾಗಿ ನಗರಸಭೆ ವತಿಯಿಂದ ಮಂಗಳವಾರ ನಗರದ ಐತಿಹಾಸಿಕ ಕೋಟೆ ಆವರಣದೊಳಗೆ ಸ್ವಚ್ಛತಾ ಕಾರ್ಯ ನಡೆಯಿತು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಿ, ಐತಿಹಾಸಿಕ ಕೋಟೆ ಆವರಣದೊಳಗೆ ಸ್ವಚ್ಛತಾ ಕಾರ್ಯಕ್ರಮದಲ್ಲಿ ಖುದ್ದು ಪಾಲ್ಗೊಂಡು, ಸ್ವಚ್ಛತೆ ಕಾರ್ಯ ನೆರವೇರಿಸಿದರು.

ಜಿಲ್ಲಾಧಿಕಾರಿಗಳು ಖುದ್ದು ಕೈಗವಸು ಧರಿಸಿ, ಸ್ವಚ್ಛತಾ ಕಾರ್ಯಕ್ಕಿಳಿದು, ವಿದ್ಯಾರ್ಥಿಗಳನ್ನು ಸ್ವಚ್ಛತಾ ಕಾರ್ಯಕ್ಕೆ ಹುರಿದುಂಬಿಸಿದರು. ಕೋಟೆ ಆವರಣದಲ್ಲಿ ಅಲ್ಲಲ್ಲಿ ಬಿದ್ದಿದ್ದ ಕಸವನ್ನು ಆಯ್ದು, ಒಂದೆಡೆ ಸಂಗ್ರಹಿಸಿ ನೀಡುವ ಕಾರ್ಯದಲ್ಲಿ ಚುರುಕಿನಿಂದ ಪಾಲ್ಗೊಂಡರು. ಸ್ವಚ್ಛತಾ ಕಾರ್ಯಕ್ಕೆ ಆಗಮಿಸಿದ್ದ ಇತರೆ ಅಧಿಕಾರಿಗಳು, ವಿದ್ಯಾರ್ಥಿಗಳು, ಸಾರ್ವಜನಿಕರು, ವಾಯುವಿಹಾರಿಗಳು, ಪ್ರವಾಸಿ ಮಿತ್ರರು ಕೋಟೆ ಆವರಣದಲ್ಲಿನ ಸ್ವಚ್ಛತೆಗೆ ಕೈಜೋಡಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಜನರಲ್ಲಿ ನೈರ್ಮಲ್ಯ ಶುಚಿತ್ವ ಕುರಿತು ಅರಿವು ಮೂಡಿಸಲು ಕಳೆದ ಸೆ.14 ರಿಂದ "ಸ್ವಚ್ಛತಾ ಹೀ ಸೇವಾ ಪಾಕ್ಷಿಕ" ಅಭಿಯಾನ ಆರಂಭಗೊಂಡಿದ್ದು, ಅಕ್ಟೋಬರ್ 01 ರವರಗೆ ನಡೆಯಲಿದೆ. ಈ ಹಿನ್ನಲೆಯಲ್ಲಿ ಪ್ರತಿನಿತ್ಯವೂ ಸ್ವಚ್ಛತಾ ಅಭಿಯಾನಕ್ಕಾಗಿ ವಿವಿಧ ಕಾರ್ಯಕ್ರಮಗಳನ್ನು ಜಿಲ್ಲೆಯಾದ್ಯಂತ ಆಯೋಜಿಸಲಾಗುತ್ತಿದೆ ಎಂದು ಹೇಳಿದರು. ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನವು ಕೇವಲ ಆ ದಿನಕ್ಕೆ ಸೀಮಿತಗೊಳಿಸಬಾರದು. ಇದು ನಿರಂತರವಾಗಿರಬೇಕು. ಈ ಅಭಿಯಾನದ ಮೂಲಕ ಸ್ವಚ್ಛತೆ ಕಾಪಾಡುವ ಜತೆಗೆ ಜನರಲ್ಲಿ ಸ್ವಚ್ಛತೆಯ ಕುರಿತು ಅರಿವು ಮೂಡಿಸುವುದಾಗಿದೆ. ಇದರಿಂದ ಸುಂದರ ನಗರ ನಿರ್ಮಾಣ ಹಾಗೂ ಉತ್ತಮ ಪರಿಸರ, ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ ಎಂದು ಹೇಳಿದರು.

ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನದ ಅಂಗವಾಗಿ ನಗರಸಭೆ ವತಿಯಿಂದ ಐತಿಹಾಸಿಕ ಕೋಟೆಯಲ್ಲಿ ಸ್ವಚ್ಛತಾ ಸೆಲ್ಫಿ ಪಾಯಿಂಟ್‌ಗಳನ್ನು ಸ್ಥಾಪಿಸಿ, ಸಾರ್ವಜನಿಕರಿಗೆ ಸೆಲ್ಫಿಗಳನ್ನು ತೆಗೆದುಕೊಳ್ಳಲು ಉತ್ತೇಜನ ನೀಡಲಾಯಿತು. ಇದೇ ಸಂದರ್ಭದಲ್ಲಿ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ನಾಗರಾಜ್ ಅವರು ಸ್ವಚ್ಛತಾ ಪ್ರತಿಜ್ಞಾವಿಧಿ ಬೋಧಿಸಿದರು.

ಸ್ವಚ್ಛತಾ ಕಾರ್ಯಕ್ರಮದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಸಾಹಸಿ ಜ್ಯೋತಿರಾಜ್, ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ನಾಗರಾಜ್ ಸೇರಿದಂತೆ, ನೆಹರು ಯುವ ಕೇಂದ್ರ, ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳು ಹಾಗೂ ಡಾನ್ ಬಾಸ್ಕೋ ಪದವಿ ಕಾಲೇಜು ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಮತ್ತು ಚಿತ್ರ ಡಾನ್ ಬಾಸ್ಕೋ ಯುವ ತಾರೆಗಳು ಸೇರಿದಂತೆ ಸಾರ್ವಜನಿಕರು, ಪ್ರವಾಸಿಗರು, ಪ್ರವಾಸಿ ಮಿತ್ರರು, ವಾಯುವಿಹಾರಿಗಳು, ಪೌರಕಾರ್ಮಿಕರು ಭಾಗವಹಿಸಿದ್ದರು.

# ಸೆ.28ರಂದು ಹಿಂದೂ ಮಹಾ ಗಣಪತಿ ವಿಸರ್ಜನಾ ಮೆರವಣಿಗೆ, ಸಂಚಾರ ಮಾರ್ಗ ಬದಲಾವಣೆ

» ಚಿತ್ರದುರ್ಗ

ಇದೇ ಸೆಪ್ಟೆಂಬರ್ 28ರಂದು ಚಿತ್ರದುರ್ಗ ನಗರದಲ್ಲಿ ಹಿಂದೂ ಮಹಾ ಗಣಪತಿ ವಿಸರ್ಜನಾ ಮೆರವಣಿಗೆ ಇರುವುದರಿಂದ ಸಂಚಾರ ಸುವ್ಯವಸ್ಥೆಗಾಗಿ ನಗರದಲ್ಲಿನ ರಸ್ತೆ ಸಂಚಾರದ ಮಾರ್ಗವನ್ನು ಬದಲಾವಣೆ ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ.



ಚಿತ್ರದುರ್ಗ ನಗರದಲ್ಲಿ ವಿಶ್ವ ಹಿಂದೂ ಪರಿಷತ್ ಮತ್ತು ಭಜರಂಗದಳದ ವತಿಯಿಂದ ಪ್ರತಿಷ್ಠಾಪಿಸಲ್ಪಟ್ಟಿರುವ ಹಿಂದೂ ಮಹಾಗಣಪತಿ ವಿಸರ್ಜನಾ ಮೆರವಣಿಗೆ ಕಾರ್ಯಕ್ರಮ ಸೆಪ್ಟೆಂಬರ್ 28 ರಂದು ನಡೆಯಲಿದ್ದು, ಸಾರ್ವಜನಿಕ ಸಂಚಾರ ಸುಗಮಗೊಳಿಸುವ ದೃಷ್ಟಿಯಿಂದ ಸೆಪ್ಟೆಂಬರ್ 28ರಂದು ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 12 ಗಂಟೆಯವರೆಗೆ ನಗರದ ಮುಖ್ಯರಸ್ತೆ ಮತ್ತು ಇತರೆ ರಸ್ತೆಗಳಲ್ಲಿ ಸಂಚರಿಸುವ ವಾಹನಗಳನ್ನು ಬದಲಿ ಮಾರ್ಗದಲ್ಲಿ ಸಂಚರಿಸುವಂತೆ ಆದೇಶಿಸಿದ್ದಾರೆ.

ವಿಸರ್ಜನಾ ಮೆರವಣಿಗೆಯು ನಗರದಲ್ಲಿನ ಮುಖ್ಯ ರಸ್ತೆಯಾದ ಬಿ.ಡಿ.ರಸ್ತೆಯಲ್ಲಿ ಸಾಗಿ ಹೊಳಲ್ಕೆರೆ ರಸ್ತೆ ಮುಖಾಂತರ ಸಾಗಲಿದ್ದು, ಈ ವಿಸರ್ಜನಾ ಮೆರವಣಿಗೆಯಲ್ಲಿ 3 ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗವಹಿಸುವ ನಿರೀಕ್ಷೆಯಿದ್ದು, ಸುಗಮ ಸಂಚಾರದ ಹಿತದೃಷ್ಟಿಯಿಂದ ಚಿತ್ರದುರ್ಗ ನಗರದಲ್ಲಿ ಸಂಚರಿಸಲಿರುವ ವಾಹನಗಳು ಬದಲಿ ಮಾರ್ಗದಲ್ಲಿ ಸಂಚರಿಸುವಂತೆ ಆದೇಶ ಮಾಡಲಾಗಿದೆ.

**ಮಾರ್ಗ ಬದಲಾವಣೆ ವಿವರ:**

ಚಿತ್ರದುರ್ಗ ನಗರದ ಚಳ್ಳಕೆರೆ ಗೇಟ್‌ನಿಂದ ಮಹಾತ್ಮ ಗಾಂಧಿ ವೃತ್ತ, ಹೊಳಲ್ಕೆರೆ ಮಾರ್ಗದ ಕಣಿವೆ ಕ್ರಾಸ್‌ವರೆಗೆ ಎಲ್ಲಾ ಮಾದರಿಯ ವಾಹನಗಳ ಸಂಚಾರ ನಿಷೇಧಿಸಿದೆ.

ಬೆಂಗಳೂರು, ಚಳ್ಳಕರೆ, ಹೊಸಪೇಟೆ, ದಾವಣಗೆರೆ, ಶಿವಮೊಗ್ಗ ಹಾಗೂ ಭೀಮಸಮುದ್ರ ಕಡೆಯಿಂದ ಬರುವ ಎಲ್ಲಾ ಮಾದರಿಯ ಲಘು ಮತ್ತು ಭಾರಿ ವಾಹನಗಳು ಹಾಗೂ ಖಾಸಗಿ ಮತ್ತು ಕೆಎಸ್‌ಆರ್‌ಟಿಸಿ ಬಸ್ಸುಗಳು ಎನ್.ಹೆಚ್–48 ರಸ್ತೆಯ ಮುಖಾಂತರ ಬಂದು ನಗರದ ಮೆದೇಹಳ್ಳಿ ರಸ್ತೆ ಮತ್ತು ಜೆಎಂಐಟಿ ವೃತ್ತದ ಮುಖಾಂತರ ನಗರಕ್ಕೆ ಬಂದು ಅದೇ ಮಾರ್ಗದಲ್ಲಿ ವಾಪಸ್ ಸಂಚರಿಸಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ.

# ಮಾರಿಕಣಿವೆ ಜಲಾಶಯ ಹೊಸದುರ್ಗಕ್ಕೆ ಸೇರಿದ್ದು

### ಮಾಜಿ ಸಚಿವ ಗೂಳಿಹಟ್ಟಿ ಶೇಖರ್ ಹೇಳಿಕೆ

**ಹೊಸದುರ್ಗ:** ವಾಣಿವಿಲಾಸ ಸಾಗರ ಜಲಾಶಯ ಸಂಪೂರ್ಣವಾಗಿ ಹೊಸದುರ್ಗ ತಾಲೂಕಿಗೆ ಸೇರಿದ್ದು ಅಂತ ಈಗಾಗಲೇ ಧೃಡಪಟ್ಟಿದೆ.



ನಾನು ಕಳೆದ ಅವಧಿಯಲ್ಲಿ ಶಾಸಕನಾಗಿದ್ದಾಗ ಈ ಬಗ್ಗೆ ವಿಧಾನಸಭೆಯಲ್ಲಿ ಪ್ರಸ್ತಾಪಿಸಿದ್ದೆ. ನೀರು ಆವರಿಸಿರುವ 28.ಸಾವಿರ ಎಕರೆ, ಜಲಾಶಯದ ಅಣೆಕಟ್ಟು ಮತ್ತು ಕಣಿವೆ ಮಾರಮ್ಮನ ದೇವಾಲಯವೂ ಹೊಸದುರ್ಗ ತಾಲೂಕಿನ ವ್ಯಾಪ್ತಿಗೆ ಸೇರಿದೆ ಎಂದು ಆಡಿಯೋ ಮಾಡಿ, ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವ ಮೂಲಕ ಮಾಜಿ ಸಚಿವ ಗೂಳಿಹಟ್ಟಿ ಶೇಖರ್ ಮಾಹಿತಿ ಹಂಚಿಕೊಂಡಿದ್ದಾರೆ.

ವಾಣಿವಿಲಾಸ ಸಾಗರ ಜಲಾಶಯದ ನೀರು ಸಂಪೂರ್ಣವಾಗಿ ಹೊಸದುರ್ಗ ತಾಲೂಕಿನ ವ್ಯಾಪ್ತಿಯಲ್ಲಿದ್ದು, ನಮ್ಮ ತಾಲ್ಲೂಕಿನ ಜನರಿಗೆ ಇದರಿಂದ ಯಾವುದೇ ಪ್ರಯೋಜನವಾಗುತ್ತಿಲ್ಲ. ಒಂದು ಹನಿ ನೀರು ಕೂಡ ನಮಗೆ ಬಳಕೆಗೆ ಬರುತ್ತಿಲ್ಲ. ಡ್ಯಾಮ್ ಹೊಸದುರ್ಗ ತಾಲ್ಲೂಕಿನ ಲಕ್ಕಿಹಳ್ಳಿ ಪಂಚಾಯಿತಿ ವ್ಯಾಪ್ತಿಗೆ ಸೇರಿದ್ದು, ಇನ್ನೂ ಮುಂದಾದರೂ ಜನರು ಜಲಾಶಯ ಸಂಪೂರ್ಣವಾಗಿ ಹೊಸದುರ್ಗ ತಾಲೂಕಿಗೆ ಸೇರಿದ್ದು ಎಂದು ಹೇಳಿ ಎಂದು ಮನವಿ ಮಾಡಿದ್ದಾರೆ.

## ಪ್ರಮುಖ ಸುದ್ದಿ

# ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹ

» ಚಿತ್ರದುರ್ಗ



ಮೂಡಾ, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರುಪಯೋಗದಲ್ಲಿ ಸಿಲುಕಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೆ ತಮ್ಮ ಸ್ಥಾನಕ್ಕೆ ರಾಜಿನಾಮೆ ನೀಡಿ ನಿಸ್ಪಕ್ಷಪಾತ ತನಿಖೆಗೆ ಸಹರಿಸುವಂತೆ ಸಂಸದ ಗೋವಿಂದ ಕಾರಜೋಳ ಒತ್ತಾಯಿಸಿದರು.

ಬಿಜೆಪಿ. ಕಾರ್ಯಾಲಯದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯಪಾಲರು ಪ್ರಾಸಿಕ್ಯೂಷನ್ ಅವಕಾಶ ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ನೀಡಿರುವ ತೀರ್ಪಿನನ್ವಯ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಭಂಡತನ ಪ್ರದರ್ಶಿಸುವ ಬದಲು ರಾಜಿನಾಮೆ ನೀಡಿ ತಮ್ಮ ಮೇಲಿರುವ ಕಳಂಕವನ್ನು ನಿವಾರಿಸಿಕೊಳ್ಳಬೇಕು. ರಾಮಕೃಷ್ಣ ಹೆಗಡೆ ತಮ್ಮ ಮೇಲೆ ಟೆಲಿಫೋನ್ ಕದ್ದಾಲಿಕೆ ಅಪವಾದ ಬಂದಾಗ ದೆಹಲಿಯಲ್ಲಿದ್ದ ಅವರು ಕಚೇರಿಗೂ ಹೋಗದೆ ನೇರವಾಗಿ ರಾಜಭವನಕ್ಕೆ ತೆರಳಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಿದರು. ರೈಲು ಅಪಘಾತವಾದಾದ ಲಾಲ್‌ಬಹದ್ದೂರ್‌ಶಾಸ್ತ್ರಿ ಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಿ ಆದರ್ಶರೆನಿಸಿಕೊಂಡರು ಇವೆಲ್ಲವನ್ನು ಈಗಿನ ಮುಖ್ಯಮಂತ್ರಿ ಮರೆತಂತಿದೆ. ಮಾಹಿತಿ ಹಕ್ಕು ಕಾರ್ಯಕರ್ತರು ನಿರಂತರವಾಗಿ ನಡೆಸಿದ ಹೋರಾಟಕ್ಕೆ ಹೈಕೋರ್ಟ್ ತೀರ್ಪಿನಿಂದ ಜಯ ಸಿಕ್ಕಂತಾಗಿದೆ. ಆಪಾದನೆ ಬಂದಾಗ ಗೌರವದಿಂದ ರಾಜಿನಾಮೆ ಕೊಡುವುದು ಒಳ್ಳೆಯದು ಎಂದು ಹೇಳಿದರು.

ಮೂಡಾ, ವಾಲ್ಮೀಕಿ ಹಗರಣದಲ್ಲಿ ರೆಡ್‌ಹ್ಯಾಂಡ್ ಆಗಿ ಸಿಕ್ಕಿಬಿದ್ದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸರ್ಕಾರಿ ಖಜಾನೆಯಿಂದ ನೇರವಾಗಿ ಹಣ ಲೂಟಿ ಮಾಡಿದ್ದಾರೆ. ಕಾಂಗ್ರೆಸ್‌ನವರೆ ತಮ್ಮ ಸ್ವಾರ್ಥಕ್ಕಾಗಿ ಬೇರೆಯವರನ್ನು ಸಿಲುಕಿಸಲು ಹೆಣೆದಿರುವ ಕಾಯಿದೆಯಲ್ಲಿ ಈಗ ಅವರೆ ಸಿಕ್ಕಿಬಿದ್ದಿದ್ದಾರೆ. ರಾಮಕೃಷ್ಣ ಹೆಗಡೆರವರ ಗರಡಿಯಲ್ಲಿ ಪಳಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಡ ಮಾಡದೆ ರಾಜಿನಾಮೆ ಕೊಡುವುದು ಸೂಕ್ತ ಎಂದರು.

ಮಾಜಿ ಶಾಸಕ ಜಿ.ಹೆಚ್. ತಿಪ್ಪಾರೆಡ್ಡಿ ಮಾತನಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಹುಳುಕು ಮುಚ್ಚಿಕೊಳ್ಳಲು ರಾಜ್ಯದ ಜನರ ಗಮನವನ್ನು ಬೇರೆಡೆ ಸೆಳೆಯುತ್ತಿದ್ದಾರೆ. ತಮ್ಮ ವರ್ಚಸ್ಸನ್ನು ಹೆಚ್ಚಿಸಿಕೊಳ್ಳಬೇಕೆಂಬ ಆಸೆಯಿದ್ದರೆ ತಕ್ಷಣವೇ ರಾಜಿನಾಮೆ ನೀಡಬೇಕು ಎಂದು ಆಗ್ರಹಿಸಿದರು. ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ ಹೈಕೋರ್ಟ್ ರಾಜ್ಯಪಾಲರ ನಡೆಯನ್ನು ಬೆಂಬಲಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅರ್ಜಿ ವಜಾಗೊಳಿಸಿರುವುದರಿಂದ ಮುಖ್ಯಮಂತ್ರಿ ಕುರ್ಚಿಯಲ್ಲಿ ಮುಂದುವರೆಯಲು ನೈತಿಕತೆಯಿಲ್ಲ. ಹಗರಣಗಳಿಗೆ ಸಂಬಂಧಿಸಿದಂತೆ ಬಿಜೆಪಿ. ಸದನದ ಒಳಗೆ ಹೊರಗೆ ನಿರಂತರವಾಗಿ ಹೋರಾಟ ಮಾಡಿಕೊಂಡು ಬರುತ್ತಿದೆ. ಮೂಡಾ ಹಗರಣ ವಿರೋಧಿಸಿ ಬಿಜೆಪಿ. ಮೈಸೂರಿಗೆ ಪಾದಯಾತ್ರೆ ನಡೆಸಿದ್ದಕ್ಕೆ ವಿರುದ್ದವಾಗಿ ಮುಖ್ಯಮಂತ್ರಿ ಜನಾಂದೋಲಕ ನಡೆಸಿ ನಮ್ಮ ಪಾದಯಾತ್ರೆಯನ್ನು ಹತ್ತಿಕ್ಕುವ ಕೆಲಸ ಮಾಡಿದರು. ಜಟ್ಟಿ ಕೆಳಗೆ ಬಿದ್ದರೂ ಮೀಸೆ ಮಣ್ಣಾಗಲಿಲ್ಲ ಎನ್ನುವಂತೆ ಸಿದ್ದರಾಮಯ್ಯನವರು ಕೆಳಗೆ ಬಿದ್ರೂ ಮೀಸೆ ಮಣ್ಣಾಗಲಿಲ್ಲ ಎನ್ನುತ್ತಿದ್ದಾರೆ. ತಮ್ಮ ಮೇಲೆ ಭ್ರಷ್ಠಾಚಾರದ ಆರೋಪ ಬಂದಾಗಲೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜಿನಾಮೆ ಕೊಡಬೇಕಿತ್ತು. ರಾಜ್ಯಾದ್ಯಂತ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಬಿಜೆಪಿ. ರಾಜಿನಾಮೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಲಿದೆ ಎಂದು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ಖನಿಜ ನಿಗಮದ ಮಾಜಿ ಅಧ್ಯಕ್ಷ ಲಿಂಗಮೂರ್ತಿ, ಮಾಜಿ ಶಾಸಕ ಎಸ್.ಕೆ.ಬಸವರಾಜನ್, ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ್, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್‌ಬೇದ್ರೆ, ತಿಪ್ಪೇಸ್ವಾಮಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಸೆ.26ರಂದು ಜಿಲ್ಲಾ ಕೃಷಿಕ ಸಮಾಜದ ವಿಶೇಷ ಕಾರ್ಯಕಾರಿ ಸಮಿತಿ ಸಭೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ಇದೇ ಸೆ.26ರಂದು ಬೆಳಿಗ್ಗೆ 11ಕ್ಕೆ ಜಿಲ್ಲಾ ಕೃಷಿಕ ಸಮಾಜದ ವಿಶೇಷ ಕಾರ್ಯಕಾರಿ ಸಮಿತಿ ಸಭೆ ಆಯೋಜಿಸಲಾಗಿದೆ.ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಕೆ.ಬಿ.ಚಂದ್ರಶೇಖರಪ್ಪ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

### ಖೇಲೋ ಇಂಡಿಯಾ ಯೋಜನೆ; ಷಟಲ್ ಬ್ಯಾಡ್ಮಿಂಟನ್: ಉಚಿತ ತರಬೇತಿ

» **ಚಿತ್ರದುರ್ಗ**

ಖೇಲೋ ಇಂಡಿಯಾ ಯೋಜನೆಯಡಿಯಲ್ಲಿ ಚಿತ್ರದುರ್ಗ ಜಿಲ್ಲೆಗೆ ಷಟಲ್ ಬ್ಯಾಡ್ಮಿಂಟನ್ ಕ್ರೀಡೆಯನ್ನು ಹಂಚಿಕೆ ಮಾಡಿರುತ್ತಾರೆ. ಹೀಗಾಗಿ ಈ ಯೋಜನೆಯಡಿ ಷಟಲ್ ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ಚಿತ್ರದುರ್ಗ ನಗರದ ಬಾಲಕ ಮತ್ತು ಬಾಲಕಿಯರಿಗೆ ಉಚಿತ ತರಬೇತಿ ನೀಡಲಾಗುವುದು. ಷಟಲ್ ಬ್ಯಾಡ್ಮಿಂಟನ್ ತರಬೇತಿ ಪಡೆಯಲು ಇಚ್ಛಿಸುವ ಹಾಗೂ ಕ್ರೀಡಾ ಆಸಕ್ತಿಯುಳ್ಳ 6 ರಿಂದ 14 ವರ್ಷದೊಳಗಿನ ಬಾಲಕ ಮತ್ತು ಬಾಲಕಿಯರು ಜಿ.ಕೆ.ಗುರುಮೂರ್ತಿ, ಖೇಲೋ ಇಂಡಿಯಾ ತರಬೇತುದಾರರು, ಒಳಾಂಗಣ ಕ್ರೀಡಾಂಗಣ, ಚಿತ್ರದುರ್ಗ ಇವರಲ್ಲಿ ಹೆಸರು ನೊಂದಾಯಿಸಬೇಕು. ಪಾಸ್‌ಪೋರ್ಟ್ ಸೈಜ್ ಫೋಟೋ, ಆಧಾರ್ ಕಾರ್ಡ್, ಜನನ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರವನ್ನು ಅಕ್ಟೋಬರ್ 05 ರೊಳಗಾಗಿ ನೀಡುವಂತೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9481038141 ಕ್ಕೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ತೋಟಗಾರಿಕೆ ನರ್ಸರಿ ಸರ್ಟಿಫಿಕೇಟ್ ಕೋರ್ಸ್: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಹಿರಿಯೂರು ತೋಟಗಾರಿಕೆ ಮಹಾವಿದ್ಯಾಲಯ ಮತ್ತು ಬಬ್ಬೂರು ಫಾರಂ ಕೃಷಿ ವಿಜ್ಞಾನ ಕೇಂದ್ರ ವತಿಯಿಂದ ತೋಟಗಾರಿಕಾ ಬೆಳೆಗಳಲ್ಲಿ ನರ್ಸರಿ ನಿರ್ವಹಣೆ ಕುರಿತು ಇದೇ ಸೆಪ್ಟೆಂಬರ್ 30 ರಿಂದ ಡಿಸೆಂಬರ್ 30 ರವರೆಗೆ ಕೌಶಲ್ಯಾಧಾರಿತ ತರಬೇತಿ ನೀಡಲಾಗುತ್ತಿದ್ದು, ಆಸಕ್ತರಿಂದ ಅರ್ಜಿ ಅಹ್ವಾನಿಸಲಾಗಿದೆ.ತರಬೇತಿಯಲ್ಲಿ ತೋಟಗಾರಿಕಾ ಬೆಳೆಗಳಲ್ಲಿ ಸಸ್ಯೋತ್ಪಾದನೆ ವಿಧಗಳಾದ ಕಸಿ, ಗೂಟಿ, ಕಾಂಡದ ತುಂಡುಗಳಿಂದ ಸಸ್ಯೋತ್ಪಾದನೆ ಮಾಡುವುದು ಹಾಗೂ ಇನ್ನಿತರೆ ಸಸ್ಯೋತ್ಪಾದನೆ ವಿಧಾನಗಳು ಮತ್ತು ಸಸ್ಯಾಗಾರದ ನಿರ್ವಹಣೆ ಕುರಿತು ಮಾಹಿತಿ ನೀಡಲಾಗುವುದು.ಈ ತರಬೇತಿಯಲ್ಲಿ ಭಾಗವಹಿಸಲು ಇಚ್ಛೆಯುಳ್ಳವರು ತರಬೇತಿ ಶುಲ್ಕ ಒಟ್ಟು ರೂ.9,000/-ಗಳನ್ನು ಪಾವತಿಸಿ ಸೆ. 29 ರೊಳಗೆ ದೂರವಾಣಿ ಮುಖಾಂತರ ಅಥವಾ ಖುದ್ದಾಗಿ ಈ ಕೆಳಕಂಡ ವಿಳಾಸಕ್ಕೆ ಸಂಪರ್ಕಿಸಿ ತಮ್ಮ ಹೆಸರು ನೋಂದಾಯಿಸ ಬಹುದಾಗಿದೆ. ಮೊದಲು ನೋಂದಾಯಿಸಿದವರಿಗೆ ಮೊದಲ ಆದ್ಯತೆ ನೀಡಲಾಗುವುದು.ಹೆಚ್ಚಿನ ಮಾಹಿತಿಗಾಗಿ ಡಾ.ಶ್ರೀಧರ ಆರ್ (ಸಹಾಯಕ ಪ್ರಾಧ್ಯಾಪಕರು), ತೋಟಗಾರಿಕೆ ಮಹಾವಿದ್ಯಾಲಯ, ಹಿರಿಯೂರು, ಮೊಬೈಲ್ ಸಂಖ್ಯೆ 9449983747, ಡಾ. ಮಹಾಂತೇಶ ಪಿ.ಎಸ್ (ತೋಟಗಾರಿಕೆ ವಿಜ್ಞಾನಿ), ಕೃಷಿ ವಿಜ್ಞಾನ ಕೇಂದ್ರ, ಬಬ್ಬೂರು ಫಾರಂ, ಹಿರಿಯೂರು. ಮೊಬೈಲ್ ಸಂಖ್ಯೆ 8088948308 ಹಾಗೂ ಡಾ. ಲತಾ ಎಸ್ (ಸಹಾಯಕ ಪ್ರಾಧ್ಯಾಪಕರು), ತೋಟಗಾರಿಕೆ ಮಹಾವಿದ್ಯಾಲಯ, ಮೊಬೈಲ್ ಸಂಖ್ಯೆ 8095836162 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಪದಾಧಿಕಾರಿಗಳ ಆಯ್ಕೆ

» **ಚಿತ್ರದುರ್ಗ**

ದಾವಣಗೆರೆ ವಿಶ್ವವಿದ್ಯಾನಿಲಯ ಪದವಿ ಕಾಲೇಜುಗಳ ಸಮಾಜಶಾಸ್ತ್ರ ಅಧ್ಯಾಪಕರ ಸಂಘದ ಸರ್ವ ಸದಸ್ಯರ ಸಭೆಯಲ್ಲಿ ಈಚೆಗೆ ಸಂಘಕ್ಕೆ ನೂತನ ಪದಾಧಿಕಾರಿ ಆಯ್ಕೆ ನಡೆಯಿತು. ಸಮಾಜಶಾಸ್ತ್ರ ಅಧ್ಯಾಪಕರ ಸಂಘಕ್ಕೆ ನೂತನ ಅಧ್ಯಕ್ಷರಾಗಿ ಹರಿಹರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಡಾ.ಹೆಚ್.ತಿಪ್ಪೇಸ್ವಾಮಿ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಉಪಾಧ್ಯಕ್ಷರಾಗಿ ಪ್ರೊ.ಹೆಚ್.ಎಸ್.ಶಿವಣ್ಣ, ಪ್ರಧಾನ ಕಾರ್ಯದರ್ಶಿಯಾಗಿ ಚಿತ್ರದುರ್ಗ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಸಹ ಪ್ರಾಧ್ಯಾಪಕ ಡಾ.ಡಿ.ಓ.ಸಿದ್ದಪ್ಪ, ಖಜಾಂಚಿಯಾಗಿ ಟಿ.ಬಿ.ಜ್ಯೋತಿ, ಸಹ ಕಾರ್ಯದರ್ಶಿ ಡಾ.ಎಸ್.ಎನ್.ವಿನಯ್, ಸಂಘಟನಾ ಕಾರ್ಯದರ್ಶಿ ಡಾ.ಎ.ಡಿ.ಬಸವರಾಜ್, ನಿರ್ದೇಶಕರಾಗಿ ಡಾ.ಎಸ್.ಎಂ.ಲತಾ, ಡಾ.ಹೆಚ್.ಬಿ.ಪ್ರಕಾಶ್, ಪ್ರೊ.ಎನ್.ಎಸ್.ಸಂಗಮೇಶ್ವರ್, ಪ್ರೊ..ಜಿ.ಟಿ.ಪ್ರದೀಪ್ ಕುಮಾರ್, ಡಾ.ನವೀನ್ ಗಂಗಾಧರ ಕೂಗಿ ಇವರನ್ನು ನೂತನ ಪದಾಧಿಕಾರಿಗಳಾಗಿ ಆಯ್ಕೆ ಮಾಡಲಾಗಿದೆ ಎಂದು ದಾವಣಗೆರೆ ವಿವಿ ಪದವಿ ಕಾಲೇಜುಗಳ ಸಮಾಜಶಾಸ್ತ್ರ ಅಧ್ಯಾಪಕರ ಸಂಘ ಪ್ರಕಟಣೆ ತಿಳಿಸಿದೆ.

### ಜಿಲ್ಲಾ ಮಟ್ಟದ ಅರಿವು ಕಾರ್ಯಾಗಾರದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್

# ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಪಾತ್ರ ಹಿರಿದು

» **ಚಿತ್ರದುರ್ಗ**

ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಪಾತ್ರ ಬಹಳ ಪ್ರಮುಖವಾಗಿದ್ದು, ಕಾರ್ಮಿಕ ವರ್ಗ ದೇಶದ ಅಭಿವೃದ್ಧಿಗೆ ಕಾರಣೀಭೂತರಾಗಿದ್ದಾರೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್ ಹೇಳಿದರು.



ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಕಾರ್ಖಾನೆಗಳು, ಬಾಯ್ಲರುಗಳು ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಕಾರ್ಮಿಕರ ವಿಮಾ ಯೋಜನೆ ವೈದ್ಯಕೀಯ ಸೇವೆ, ಕಾರ್ಮಿಕರ ಭವಿಷ್ಯನಿಧಿ ಸಂಘಟನೆ ಇವರುಗಳ ಸಂಯುಕ್ತಾಶ್ರಯದಲ್ಲಿ " ಜಿಲ್ಲೆಯ ಉದ್ಯೋಗದಾತರಿಗೆ, ಗುತ್ತಿಗೆದಾರರಿಗೆ, ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳಿಗೆ ಹಾಗೂ ಕಾರ್ಮಿಕರುಗಳಿಗೆ ಕಾರ್ಮಿಕ ಇಲಾಖೆಯಿಂದಅನುಷ್ಠಾನಗೊಳಿಸುತ್ತಿರುವ ವಿವಿಧ ಕಾರ್ಮಿಕ ಕಾಯ್ದೆಗಳ ಹಾಗೂ ಸರ್ಕಾರದ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಕುರಿತು ಜಿಲ್ಲಾ ಮಟ್ಟದ ಅರಿವು ಕಾರ್ಯಾಗಾರ" ಉದ್ಘಾಟಿಸಿ ಅವರು ಮಾತನಾಡಿದರು.ಕಾರ್ಮಿಕ ಇಲಾಖೆಯ ಯೋಜನೆಗಳು, ಸೌಲಭ್ಯ ಪಡೆಯುವ ನಿಟ್ಟಿನಲ್ಲಿ ಅರ್ಹ ಕಾರ್ಮಿಕರು ತಪ್ಪದೇ ನೋಂದಣಿ ಮಾಡಿಸಿಕೊಳ್ಳಬೇಕು. ಕಾರ್ಮಿಕರು ನೊಂದಣಿ ಮಾಡಿಕೊಳ್ಳದಿದ್ದರೆ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುವುದಿಲ್ಲ. ಹೀಗಾಗಿ ಕಾರ್ಮಿಕರು ಇಲಾಖೆಯ ಸೌಲಭ್ಯಗಳು, ಯೋಜನೆಗಳ, ಕಾರ್ಮಿಕ ಕಾನೂನುಗಳ ಕುರಿತು ಮಾಹಿತಿ ತಿಳಿದುಕೊಳ್ಳಬೇಕು ಎಂದು ಹೇಳಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಮಾತನಾಡಿ, ಕಾರ್ಮಿಕ ಇಲಾಖೆಯ ಯೋಜನೆಗಳು, ಸೌಲಭ್ಯಗಳು ಕುರಿತು ಅರಿವು ಹೊಂದುವುದು ಅಗತ್ಯ. ಇದರಿಂದ ಕಾರ್ಮಿಕರು ಸೌಲಭ್ಯ ಪಡೆಯಲು ಸಹಕಾರಿಯಾಗಲಿದೆ. ಅರ್ಹ ಕಾರ್ಮಿಕರಿಗೆ ಇಲಾಖೆಯ ಸೌಲಭ್ಯ ದೊರೆಯುವಂತೆ ಕಾರ್ಮಿಕ ಸಂಘಟನೆಗಳು ನೋಡಿಕೊಳ್ಳಬೇಕು ಎಂದು ಹೇಳಿದರು.

ದೇಶ ಕಾಯುವ ಸೈನಿಕರು, ಅನ್ನ ನೀಡುವ ರೈತರಂತೆ ಕಾರ್ಮಿಕರು ಸಹ ದೇಶಕ್ಕೆ ಬಹಳ ಮುಖ್ಯ. ಕಾರ್ಮಿಕರಿಗೆ ಉತ್ತಮ ಸೌಲಭ್ಯ ದೊರೆತರೆ ಕಾರ್ಮಿಕ ಕಲ್ಯಾಣದ ಜತೆಗೆ ದೇಶದ ಕಲ್ಯಾಣವಾಗಲಿದೆ ಎಂದು ಹೇಳಿದರು.ಬಳ್ಳಾರಿ- ದಾವಣಗೆರೆ ಸಹಾಯಕ ಕಾರ್ಮಿಕ ಆಯುಕ್ತ ಡಾ.ಅವಿನಾಶ್ ನಾಯ್ಕ್ ಮಾತನಾಡಿ, ಕಾರ್ಮಿಕ ವರ್ಗ ದೇಶದ ಬೆನ್ನೆಲುಬು. ಕಾರ್ಮಿಕರ ಕೆಲಸದಿಂದ ದೇಶದ ಆರ್ಥಿಕಾಭಿವೃದ್ಧಿಗೆ ಬಹುದೊಡ್ಡ ಕೊಡುಗೆ ಲಭಿಸುತ್ತಿದೆ ಎಂದು ಹೇಳಿದರು.

ಅರ್ಹ ಕಾರ್ಮಿಕರೆಲ್ಲರೂ ಇಲಾಖೆಯ ಸೌಲಭ್ಯ, ಯೋಜನೆಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು. ಉದ್ದಿಮೆದಾರರಿಗೂ ಕಾರ್ಮಿಕ ಕಾಯ್ದೆಗಳ ಕುರಿತು ಮಾಹಿತಿ ಇರಬೇಕು. ಜತೆಗೆ ಅವರ ಕರ್ತವ್ಯಗಳ ಬಗ್ಗೆ ತಿಳಿದುಕೊಂಡಿರಬೇಕು. ಕಾರ್ಮಿಕ ವರ್ಗ ಹಾಗೂ ಮಾಲೀಕ ವರ್ಗದವರ ನಡುವೆ ಸಮನ್ವಯತೆ ಸಾಧಿಸಲು ಕಾರ್ಮಿಕ ಕಾಯ್ದೆಗಳು ಹಾಗೂ ಯೋಜನೆಗಳ ಬಗ್ಗೆ ಮಾಹಿತಿ ಇರಬೇಕು. ಈ ಕಾರ್ಯಾಗಾರದ ಸಂಪೂರ್ಣ ಸದುಪಯೋಗ ಪಡೆದುಕೊಂಡರೆ ಕೈಗಾರಿಕಾ ಬಾಂಧವ್ಯ ವೃದ್ಧಿಯಾಗಲಿದೆ ಎಂದು ಹೇಳಿದರು.

ಕಾರ್ಮಿಕ ಅಧಿಕಾರಿ ಜಿ.ಇಬ್ರಾಹಿಂ ಸಾಬ್ ಮಾತನಾಡಿ,ಕಾರ್ಮಿಕರಕಲ್ಯಾಣಕ್ಕಾಗಿರಾಜ್ಯ ಸರ್ಕಾರ ಹೊಸ ಹೊಸ ಯೋಜನೆಗಳು, ಕಾಯ್ದೆಗಳನ್ನು ಜಾರಿಗೊಳಿಸಿದ್ದು, ಇವುಗಳ ಕುರಿತು ಕಾರ್ಮಿಕರಿಗೆ, ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ, ಕಾರ್ಮಿಕ ಇಲಾಖೆಯ ಯೋಜನೆಗಳು, ಸೌಲಭ್ಯಗಳ ಕುರಿತು ಪರಿಚಯಿಸುವ ಸಲುವಾಗಿ ಪ್ರತಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಅರಿವು ಕಾರ್ಯಾಗಾರ ಆಯೋಜಿಸಲಾಗುತ್ತಿದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಕಾರ್ಮಿಕರ ಭವಿಷ್ಯನಿಧಿ ಇಲಾಖೆಯ ಅಧಿಕಾರಿ ಹಾಗೂ ಸಂಪನ್ಮೂಲ ವ್ಯಕ್ತಿ ವೇಣುಗೋಪಾಲ್, ಕಾರ್ಮಿಕ ನಿರೀಕ್ಷಕರಾದ ರಾಜಣ್ಣ, ಅಲ್ಲಾಭಕ್ಷಿ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಸೇರಿದಂತೆ ಸಂಘಟಿತ, ಅಸಂಘಟಿತ ಕಾರ್ಮಿಕ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಮಿಕ ಇಲಾಖೆ ಸಿಬ್ಬಂದಿ ಇದ್ದರು.

# ಸರ್ಕಾರಿ ಆಸ್ತಿ ದತ್ತಾಂಶದ ಲ್ಯಾಂಡ್ ಬೀಟ್

» **ಚಿತ್ರದುರ್ಗ**

ಸರ್ಕಾರದ ನಿರ್ದೇಶನದಂತೆ ಜಿಲ್ಲೆಯಲ್ಲಿನ ಸರ್ಕಾರಿ ಆಸ್ತಿಗಳನ್ನು ಗುರುತಿಸಿ, ಹದ್ದುಬಸ್ತುಗೊಳಿಸಿಕೊಂಡು, ಲ್ಯಾಂಡ್ ಬೀಟ್ ದತ್ತಾಂಶದಲ್ಲಿ ಅಪ್‌ಲೋಡ್ ಮಾಡುವ ಕಾರ್ಯದಲ್ಲಿ ಕನಿಷ್ಟ ಶೇ. 95 ರಷ್ಟು ಪ್ರಗತಿ ಸಾಧಿಸಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ಏರ್ಪಡಿಸಿದ ಕಂದಾಯ ಇಲಾಖಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರಿ ಆಸ್ತಿಗಳನ್ನು ಗುರುತಿಸಿ, ನಿಖರಗೊಳಿಸಿ, ಹದ್ದುಬಸ್ತು ಮಾಡಿಕೊಳ್ಳುವ ಕುರಿತಂತೆ ಸರ್ಕಾರ ಲ್ಯಾಂಡ್ ಬೀಟ್ ಕಾರ್ಯಕ್ರಮ ಜಾರಿಗೊಳಿಸಿದ್ದು, ಜಿಲ್ಲೆಯಲ್ಲಿ ಪ್ರಸ್ತುತ ಸರ್ಕಾರಿ ಆಸ್ತಿಗಳ ದತ್ತಾಂಶ ಅಪ್‌ಲೋಡ್ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಲ್ಯಾಂಡ್ ಬೀಟ್ ಕಾರ್ಯಕ್ರಮದಡಿ ದತ್ತಾಂಶ ಅಪ್‌ಲೋಡ್ ಮಾಡುವ ಕಾರ್ಯ ಜಿಲ್ಲೆಯಲ್ಲಿ ಕನಿಷ್ಟ 95 ರಷ್ಟು ಸಾಧನೆಯಾಗಬೇಕು. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿದ್ದು, ಎಲ್ಲ ಅಧಿಕಾರಿಗಳು ತಮ್ಮ ಅಧೀನ ಸಿಬ್ಬಂದಿಗಳನ್ನು ಸಮನ್ವಯಗೊಳಿಸಿ, ಪ್ರಗತಿ ಸಾಧಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಬರುವ ಸೆ. 27 ರಂದು ಕಂದಾಯ ಸಚಿವರು ರಾಜ್ಯ ಮಟ್ಟದಲ್ಲಿ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದು, ಇದಕ್ಕಾಗಿ ಅಗತ್ಯ ಮಾಹಿತಿಯನ್ನು ಕ್ರೋಢೀಕರಿಸಿ, ಸಲ್ಲಿಸಬೇಕು ಎಂದು ಸೂಚನೆ ನೀಡಿದರು.

ವಿಪತ್ತು ನಿರ್ವಹಣೆ, ಆಧಾರ್ ಸೀಡಿಂಗ್, ಲ್ಯಾಂಡ್ ಬೀಟ್, ಇ-ಆಫೀಸ್, ಜನತಾದರ್ಶನ ಸಭೆಗಳಲ್ಲಿ ಸಲ್ಲಿಕೆಯಾದ ಅರ್ಜಿಗಳ ವಿಲೇವಾರಿ, ಸಕಾಲ, ಪೋಡಿ ಪ್ರಕರಣಗಳ ಕುರಿತು ಪ್ರಗತಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಜನತಾದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಸಲ್ಲಿಕೆಯಾಗಿರುವ ಕುಂದುಕೊರತೆ ಅರ್ಜಿಗಳನ್ನು ನಿಗದಿತ ಕಾಲಮಿತಿಯೊಳಗೆ ವಿಲೇವಾರಿ ಮಾಡಬೇಕು. ಪಹಣಿ- ಆಧಾರ್ ಸೀಡಿಂಗ್ ಕಾರ್ಯದಲ್ಲಿ ಪ್ರಗತಿ ಸಾಧಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತಿಕ್ ಎಂ., ಜಂಟಿಕೃಷಿ ನಿರ್ದೇಶಕ ಮಂಜುನಾಥ್ ಸೇರಿದಂತೆ ಎಲ್ಲ ತಹಸಿಲ್ದಾರರು ಉಪಸ್ಥಿತರಿದ್ದರು.

## ಆತ್ಮಹತ್ಯೆಗೆ ಶರಣಾಗಿದ ವಾಲ್ಮೀಕಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಸರ್ಕಾರ ಸಹಾಯಧನ ಬಿಡುಗಡೆ



» **ಚಿತ್ರದುರ್ಗ**

ಆತ್ಮಹತ್ಯೆಗೆ ಶರಣಾಗಿದ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಪಿ ಅವರ ಕುಟುಂಬಕ್ಕೆ ರಾಜ್ಯ ಸರ್ಕಾರದಿಂದ 25 ಲಕ್ಷ ರೂ. ಸಹಾಯಧನ ಬಿಡುಗಡೆ ಮಾಡಲಾಗಿದೆ.

ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರು ಭೋವಿಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಶಿಕ್ಷಣ ಸಚಿವ ಮಧುಬಂಗಾರಪ್ಪ, ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್ ರವಿಕುಮಾರ ಹಿರಿಯ ಅಧಿಕಾರಿಗಳ ಸಮಕ್ಷದಲ್ಲಿ ವಿತರಿಸಿದರುಈ ಕುರಿತು ಸಿಎಂ ಕಚೇರಿಯಿಂದ ಪ್ರಕಟಣೆ ಹೊರಡಿಸಲಾಗಿದ್ದು, ಮುಖ್ಯಮಂತ್ರಿಯವರು ದಿನಾಂಕ: 19-07-2024 ರಂದು ವಿಧಾನಸೌಧದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಅಭಿವೃದ್ಧಿ ನಿಗಮದ ಕಛೇರಿ ಅಧೀಕ್ಷಕರಾದ ದಿವಂಗತ ಚಂದ್ರಶೇಖರನ್ ಪಿ ಇವರ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಸದರಿ ಕುಟುಂಬಕ್ಕೆ ರೂ.25.00 ಲಕ್ಷಗಳ ಸಹಾಯಧನ ನೀಡುವುದಾಗಿ ಘೋಷಣೆ ಮಾಡಿದ್ದರು. ದಿನಾಂಕ:18.09.2024ರ ಸರ್ಕಾರದ ಆದೇಶದಂತೆ ದಿ. ಚಂದ್ರಶೇಖರನ್ ಪಿ ಇವರ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಸದರಿ ಕುಟುಂಬಕ್ಕೆ ರೂ.25.00 ಲಕ್ಷಗಳ ಸಹಾಯಧನವನ್ನು ಬಿಡುಗಡೆಗೊಳಿ ಸಲಾಗಿದೆ. ಈ ಸಂಬಂಧ ಮೃತರ ಪತ್ನಿ ಕವಿತಾ ಅವರ ಬ್ಯಾಂಕ್ ಖಾತೆಗೆ ಪಾವತಿಸಲಾಗುತ್ತಿದೆ. ಖಜಾನೆ ಬಿಲ್ ಸಲ್ಲಿಸಲಾಗಿದ್ದು, ಇಂದು ಸಂಜೆ 4.30ರ ಒಳಗಾಗಿ ಕವಿತಾ ರವರ ಬ್ಯಾಂಕ್ ಖಾತೆಗೆ ಜಮೆಯಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಶಿವಮೊಗ್ಗ ಜಿಲ್ಲೆ ವಿನೋಬನಗರ ಪೋಲಿಸ್ ಠಾಣೆ ಅಪರಾಧ ಸಂಖ್ಯೆ:83/2024 ಕಲಂ 360 ರೆ/ವಿ 34 ಐಪಿಸಿ ಹಾಗೂ ಕಲಂ:3(2) (ತ) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ದೌರ್ಜನ್ಯ ನಿಷೇಧ ಕಾಯ್ದೆ-1989ರಡಿ ಸಿಐಡಿಯ ವಿಶೇಷ ತನಿಖಾ ತಂಡವು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುವ ಹಿನ್ನಲೆಯಲ್ಲಿ ದೌರ್ಜನ್ಯ ನಿಷೇಧ ಕಾಯ್ದೆಯ ನಿಯಮಗಳಂತೆ ರೂ.8.25 ಲಕ್ಷಗಳನ್ನು ದಿ.ಚಂದ್ರಶೇಖರನ್ ಪಿ ಇವರ ಪತ್ನಿ ಕವಿತಾ ರವರಿಗೆ ಮಂಜೂರು ಮಾಡಲಾಗಿದೆ. ಚಂದ್ರಶೇಖರನ್ ಪಿ ಇವರಿಗೆ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಅಭಿವೃದ್ಧಿ ನಿಗಮದಿಂದ ಪಾವತಿಸಬೇಕಾದ ಸಂಬಳ ಮತ್ತು ರಜೆ ನಗದೀಕರಣಗಳಿಗೆ ಸಂಬಂಧಿಸಿದ ರೂ.1,41,361ಗಳನ್ನು ಈಗಾಗಲೇ ಕವಿತಾ ಅವರ ಬ್ಯಾಂಕ್ ಖಾತೆಗೆ ಪಾವತಿಸಲಾಗಿದೆ.

# ಧರ್ಮಸ್ಥಳ ಸಂಸ್ಥೆಯಿಂದ 10 ಸಾವಿರ ಸಹಾಧನ

» **ಹೊಸದುರ್ಗ**

ಪಟ್ಟಣದ ಶಾಂತಿನಗದ ನಿವಾಸಿ ಅಸ್ಸೀಯ ಖನಂ. ಅವರ ಮನೆ ಮಳೆ ಗಾಳಿಯಿಂದ ಬಿದ್ದಿದ್ದು. ಅದಕ್ಕೆ ಸಹಾಯಧನ ಕೋರಿ ಅರ್ಜಿ ಸಲ್ಲಿಸಿದ್ದರು



ಅವರ ಸಹಾಯಧನವಾಗಿ 10 ಸಾವಿರ ರೂ ಮಂಜೂರಾತಿ ಪತ್ರವನ್ನ ಅವರಿಗೆ ಅಸ್ತಾಂತರಿಸಲಾಗಿದೆ ಎಂದು ಹಾಲುರಾಮೇಶ್ವರ ಯೋಜನ ಕಚೇರಿಯ ಯೋಜನಾಧಿಕಾರಿ ಚಂದ್ರಶೇಖರ್ ಡಿ. ತಿಳಿಸಿದರು.

ಶ್ರೀ ಧರ್ಮಸ್ಥಳ ಸಂಸ್ಥೆಯ ವತಿಯಿಂದ ಶ್ರೀ ಹಾಲುರಾಮೇಶ್ವರ ಯೋಜನಾ ಕಛೇರಿ ನಗರ ವಲಯದ ಅಡಿಯಲ್ಲಿ ಪಟ್ಟಣದ ಶಾಂತಿ ನಗರದ ಕಾರ್ಯಕ್ಷೇತ್ರದಲ್ಲಿ ಸೇವಾ ಪ್ರತಿನಿಧಿಯಾಗಿ ಕೆಲಸ ಮಾಡುತ್ತಿರುವ ಅಸ್ಸೀಯ ಖನಂ. ಅವರ ಮನೆ ಮಳೆ ಗಾಳಿಯಿಂದ ಮನೆ ಬಿದ್ದಿದ್ದು. ಅದಕ್ಕೆ ಸಹಾಯಧನ ಕೋರಿ ಅರ್ಜಿ ಸಲ್ಲಿಸಿದ್ದರು ಸಹಾಯಧನ ಪೂಜ್ಯರು ಮಂಜೂರು ಮಾಡಿದ್ದಾರೆ ಎಂದರು

ಪ್ರಾದೇಶಿಕ ನಿರ್ದೇಶಕರಾದ ಗೀತಾ ಮಾತನಾಡಿ ಧರ್ಮಸ್ಥಳ ಗ್ರಾಮಭಿರುದ್ಧಿ ಯೋಜನೆ ಕರ್ನಾಟಕ ರಾಜ್ಯ ದಲ್ಲಿ ಇಂತಹ ಬಹಳಷ್ಟು ಫಲಾನುಭವಿಗಳಿಗೆ ಪೂಜ್ಯ ರು ಸಹಾಯ ಧನ ಮಂಜೂರಾತಿ ನೀಡುತ್ತಿದ್ದು ಸಾಮಾನ್ಯ ಜನರಿಗೆ ಇದು ಸಹಾಯ ಆಗಿರುತ್ತದೆ ಎಂದರು. ಈ ಸಂಧರ್ಬದಲ್ಲಿ ಹೊಸದುರ್ಗ ಯೋಜನಾಧಿಕಾರಿಗಳಾದ ಶಿವಣ್ಣ ಸೇರಿದಂತೆ ವಲಯ ಮೇಲ್ವಿಚಾರಕರು, ಸೇವಾ ಪ್ರತಿನಿಧಿ. ಸಂಘದ ಸದಸ್ಯರು ಉಪಸ್ಥಿತರಿದ್ದರು.


## ಪ್ರಮುಖ ಸುದ್ದಿ

# ವಿದ್ಯಾರ್ಥಿ ವೇತನ ಕುರಿತು ಸಾಮಾಜಿಕ ಜಾಲತಾಣದಲ್ಲಿ ತಪ್ಪು ಸಂದೇಶ: ಮೋಸ ಹೋಗದಿರಲು ಕೋರಿಕೆ

» **ಚಿತ್ರದುರ್ಗ**

ತಂದೆ ಇಲ್ಲದ ಮಕ್ಕಳ ಖಾತೆಗೆ ವರ್ಷಕ್ಕೆ ರೂ. 24,000 ಗಳ ಸ್ಕಾಲರ್ ವಿದ್ದು, ಜನ ಸಾಮಾನ್ಯರಿಗೆ ಈ ವಿಚಾರ ತಿಳಿದೇ ಇಲ್ಲ. ಆದುದರಿಂದ ತಮಗೆ ಗೊತ್ತಿರುವ ಯಾರಾದರೂ ತಂದೆ ಇಲ್ಲದ ಮಕ್ಕಳು ಇದ್ದಲ್ಲಿ ಅವರ ಪೋಷಕರಿಗೆ ಕೂಡಲೇ ಅರ್ಜಿ ಸಲ್ಲಿಸಲು ತಿಳಿಸಿ ಎಂಬ ಸಂದೇಶ ವಾಟ್ಸಪ್ ನಲ್ಲಿ ಹರಿದಾಡುತ್ತಿದ್ದು ಜನರಲ್ಲಿ ಗೊಂದಲಕ್ಕೀಡು ಮಾಡಿದೆ.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ. ದಕ್ಷಿಣ ಕನ್ನಡ, ಮಂಗಳೂರು ಎಂಬ ಮೊಹರು ಹಾಕಿರುವ ಈ ವಾಟ್ಸಪ್ ಸಂದೇಶ ಜನರ ಪೋನ್‌ಗಳಲ್ಲಿ ಒಂದು ತಿಂಗಳಿನಿಂದ ಹರಿದಾಡುತ್ತಿದೆ. ಈ ಸಂದೇಶವನ್ನು ನೋಡಿದ ಜನ ಪ್ರತಿನಿತ್ಯ ಗ್ರಾಮ ಪಂಚಾಯತ್, ಕಂದಾಯ ಅಧಿಕಾರಿಗಳ ಕಛೇರಿ, ತಾಲ್ಲೂಕು, ಜಿಲ್ಲಾಧಿಕಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಛೇರಿ ಸೇರಿ ಎಲ್ಲಾ ಕಡೆ ಅಲೆದಾಡುತ್ತಿದ್ದಾರೆ. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಛೇರಿಯಲ್ಲಿ ಪ್ರತಿದಿನ ನೂರಾರು ಜನರು ಬಂದು ಯೋಜನೆಯ ಬಗ್ಗೆ ವಿಚಾರಿಸಿ ಅರ್ಜಿ ನೀಡುತ್ತಿರುವುದು ಅಧಿಕಾರಿಗಳಲ್ಲಿ ಚಿಂತೆಗೀಡು ಮಾಡಿದೆ. ಬಹಳಷ್ಟು ಜನರು ದೂರವಾಣಿ ಕರೆ ಮೂಲಕವು ವಿಚಾರಿಸುತ್ತಿದ್ದಾರೆ. ಈ ಸಂದೇಶವನ್ನು ಬಂಡವಾಳ ಮಾಡಿಕೊಂಡಿರುವ ಕೆಲವರು ಅಮಾಯಕ, ಮುಗ್ಧ ಜನರನ್ನು ಸುಲಿಗೆ ಮಾಡಲು ಶುರು ಮಾಡಿದ್ದಾರೆ. ಒಂದೊಂದು ಅರ್ಜಿಗೆ ಕನಿಷ್ಠ 5 ರಿಂದ 10 ಸಾವಿರ ರೂಗಳನ್ನು ವಸೂಲಿ ಮಾಡಿಕೊಂಡು ಜನರಿಗೆ ಮೋಸ ಮಾಡುತ್ತಿದ್ದಾರೆ. ಆದ್ದರಿಂದ ಮೋಸ ಹೋಗದಂತೆ ಎಚ್ಚರಿಕೆಯಿಂದಿರಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.




ಕೇಂದ್ರ ಸರ್ಕಾರದ ಪುರಸ್ಕತ ಪ್ರಾಯೋಜಕತ್ವ ಈ ಯೋಜನೆಯನ್ನು 2011ರಲ್ಲಿ ರಾಜ್ಯ ಮಕ್ಕಳ ರಕ್ಷಣಾ ನಿರ್ದೇಶನಾಲಯದ ವ್ಯಾಪ್ತಿಗೆ ತರಲಾಗಿದೆ. ಸಂಕಷ್ಟಕ್ಕೆ ಈಡಾಗುವ ಕುಟುಂಬದಲ್ಲಿನ ಮಗು, ಜೈವಿಕ ಕುಟುಂಬದಲ್ಲೇ ಮುಂದುವರೆಯಲು, ಮಗುವಿನ ಶಿಕ್ಷಣ, ಮಕ್ಕಳು ನಿರ್ಗತಿಕರಾಗುವುದು, ಸಂಕಷ್ಟಕ್ಕೀಡಾಗುವುದು, ಓಡಿಹೋಗುವುದು, ಬಲವಂತದ ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ ಮುಂತಾದವುಗಳಿಂದ ತಡೆಗಟ್ಟುವ ಪ್ರಯತ್ನ ಹಾಗೂ ಅವರಿಗೆ ಪುನರ್ವಸತಿ ಕಲ್ಪಿಸುವ ದೃಷ್ಟಿಯಿಂದ ಈ ಯೋಜನೆಯನ್ನು ಜಾರಿಗೆ ತರಲಾಗಿದೆ.

ಈ ಯೋಜನೆಯ ಪ್ರಕಾರ ಫಲಾನುಭವಿಯಾಗಲು ಕೆಲವು ವಿಶೇಷ ಮಾನದಂಡಗಳಿವೆ. ಇಬ್ಬರೂ ಪೋಷಕರನ್ನು ಕಳೆದುಕೊಂಡ ಮಕ್ಕಳು, ಪೋಷಕರು ಕಾರಾಗೃಹದಲ್ಲಿರುವ ಮಕ್ಕಳು, ಕಾನೂನಿನೊಂದಿಗೆ ಸಂಘರ್ಷಕ್ಕೆ ಒಳಪಟ್ಟಿರುವವರ ಮಕ್ಕಳು, ಪಿ.ಎಂ ಕೇರ್ ಚಿಲ್ಡ್ರನ್ ಯೋಜನೆಯ ಅನುಮೋದಿತ ಮಕ್ಕಳು, ಬಾಲಕಾರ್ಮಿಕ ಸಂತ್ರಸ್ಥರು, ಮಕ್ಕಳ ಕಳ್ಳಸಾಗಾಣಿಕೆಗೆ ಒಳಗಾದ ಮಕ್ಕಳು, ಬಾಲ್ಯವಿವಾಹಕ್ಕೊಳಗಾದ ಮಕ್ಕಳು, ಪೋಕ್ಸೋ ಸಂತ್ರಸ್ಥ ಮಕ್ಕಳು, ಪೋಷಕರಿಬ್ಬರೂ ಮಾರಾಣಾಂತಿಕ ಕಾಯಿಲೆಗೆ ತುತ್ತಾಗಿರುವವರ ಮಕ್ಕಳು, ಬಾಲಸ್ವರಾಜ್ ಪೋರ್ಟಲ್ ನಲ್ಲಿ ನೊಂದಾಯಿಸಲಾದ ಮಕ್ಕಳು, ಪಾಲನೆ ಮತ್ತು ರಕ್ಷಣೆಗೆ ಅಗತ್ಯವಿರುವ ಪಾಲನಾ ಸಂಸ್ಥೆಯ ಮಕ್ಕಳು ಹಾಗೂ ಇತರೆ ದುಡಿಯುವ ಪೋಷಕರನ್ನು ಕಳೆದುಕೊಂಡ ವಿಧವೆ,ವಿಚ್ಛೇದಿತಮತ್ತುವಿಸ್ತತಕುಟುಂಬದ ಮಕ್ಕಳು ಈ ಯೋಜನೆಯ ವ್ಯಾಪ್ತಿಗೆ ಒಳಪಡುವರು. ಅದ್ದರಿಂದ ಸುಳ್ಳು ಸಂದೇಶ ನಂಬದಿರುವಂತೆ ಸಾರ್ವಜನಿಕರಿಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಫಾಸ್ಟ್ ನ್ಯೂಸ್

### ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪನೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದಲ್ಲಿ ಒದಗಿಸುವಂತೆ ಸ್ಥಾಪಿಸಲಾಗಿರುವ ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಇನ್ನಷ್ಟು ಬಲಪಡಿಸಲು 2024-25ನೇ ಸಾಲಿನಲ್ಲಿ ರಾಜ್ಯ ಕೃಷಿ ವಲಯ ಕೃಷಿ ಯಾಂತ್ರೀಕರಣ ಯೋಜನೆಯಡಿ ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪನೆಗೆ ಸರ್ಕಾರ ಅನುಮೋದನೆ ನೀಡಿದೆ.

ಅದರಂತೆ ಜಿಲ್ಲೆಗೆ ಸಾಮಾನ್ಯ ವರ್ಗದಡಿ ಎಫ್.ಪಿ.ಓ, ಎನ್.ಜಿ.ಓ, ಇತರೆ ಸಂಘ ಸಂಸ್ಥೆಗಳು ಚಾಲ್ತಿಯಲ್ಲಿರುವ ಸಿ.ಹೆಚ್.ಎಸ್.ಸಿ ಗಳಿಗೆ 1 ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ 1 ಕಂಬೈನ್ಡ್ ಹಾರ್ವೆಸ್ಟರ್ ಹಬ್‌ನ್ನು ಸ್ಥಾಪನ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಸಾಮಾನ್ಯ ವರ್ಗದ ಎಫ್.ಪಿ.ಓ, ಎನ್.ಜಿ.ಓ, ಇತರೆ ಸಂಘ ಸಂಸ್ಥೆಗಳು ಸಿ.ಹೆಚ್.ಸಿ ಹಾಗೂ ಪರಿಶಿಷ್ಟ ಪಂಗಡದಡಿ ವೈಯಕ್ತಿಕ ಫಲಾನುಭವಿಗಳಿಗೆ ಗರಿಷ್ಟ ಶೇ. 70 ರಂತೆ ಮಾರ್ಗಸೂಚಿಯ ಮಿತಿಗೆ ಒಳಪಟ್ಟು ಸಹಾಯಧನವನ್ನು ನೀಡಲಾಗುವುದು. ಸಹಾಯಧನವನ್ನು ಕ್ರೆಡಿಟ್ ಲಿಂಕ್ಡ್ ಬ್ಯಾಂಕ್ ಎನ್‌ಡೆಡ್ ಸಬ್ಸಿಡಿ ಮುಖಾಂತರ ನೀಡಲಾಗುವುದು. ಆಯ್ಕೆಯಾದ ಸಂಸ್ಥೆ, ವೈಯಕ್ತಿಕ ಫಲಾನುಭವಿಗಳಿಗೆ ಕೃಷಿ ಮೂಲಭೂತ ಸೌಕರ್ಯನಿಧಿ ಯೋಜನೆಯಡಿ ಬಡ್ಡಿ ರಿಯಾಯಿತಿಯ ನೆರವನ್ನು ಪಡೆಯಲು ಸಹ ಅವಕಾಶವಿರುತ್ತದೆ.ಆಸಕ್ತ ಸಂಘ ಸಂಸ್ಥೆಗಳು ನೊಂದಣಿ ಪ್ರಮಾಣ ಪತ್ರ, ಜಿಎಸ್‌ಟಿ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಮತ್ತು ಸಿಹೆಚ್.ಎಸ್.ಸಿ ನಡೆಸಿದ ಅನುಭವದ ವಿವರಗಳನ್ನು ಹಾಗೂ ವೈಯಕ್ತಿಕ ಫಲಾನುಭವಿಗಳು ಅರ್ಜಿಯೊಂದಿಗೆ ಪಹಣಿ, ಎಫ್.ಐ.ಡಿ, ಜಾತಿ ಪ್ರಮಾಣ ಪತ್ರ, ಗುರುತಿನ ಚೀಟಿ, ಬ್ಯಾಂಕ್ ಪಾಸ್‌ಬುಕ್ ಮತ್ತು ರೂ.100 ಗಳ ಛಾಪಾ ಕಾಗದದ ಮೇಲೆ ಹಬ್‌ನ್ನು ಪರಬಾರೆ ಮಾಡುವುದಿಲ್ಲವೆಂದು ಮುಚ್ಚಳಿಕೆ ಪತ್ರದೊಂದಿಗೆ ಇದೇ ಸೆ.30ರೊಳಗೆ ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸಲು ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್ ತಿಳಿಸಿದ್ದಾರೆ.

### 10 ದಿನಗಳ ಉದ್ಯಮಶೀಲತಾ ತರಬೇತಿ

» ಚಿತ್ರದುರ್ಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಇವರ ಪ್ರಾಯೋಜಕತ್ವದಲ್ಲಿ, ಧಾರವಾಡ ಸಿಡಾಕ್ ವತಿಯಿಂದ ಇದೇ ಸೆಪ್ಟಂಬರ್ ನಾಲ್ಕನೇ ವಾರದಲ್ಲಿ 10 ದಿನಗಳ ಉದ್ಯಮಶೀಲತಾ ತರಬೇತಿ ಶಿಬಿರ ಆಯೋಜಿಸಲಾಗಿದೆ. 18 ರಿಂದ 55 ವರ್ಷ ವಯೋಮಿತಿಯೊಳಗಿನ 10ನೇ ತರಗತಿ ಪಾಸಾದ ಪರಿಶಿಷ್ಟ ಪಂಗಡದ ಉದ್ಯಮಾಕಾಂಕ್ಷಿಗಳು ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಪಾಸ್‌ಪೋರ್ಟ್ ಅಳತೆಯ 2 ಫೋಟೋ ಹಾಗೂ ಆಧಾರ್ ಕಾರ್ಡ್‌ನ ಪ್ರತಿಯೊಂದಿಗೆ ನಗರದ ಜೋಗಿಮಟ್ಟಿ ರಸ್ತೆಯಲ್ಲಿನ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ನ ಸಿಡಾಕ್ ಜಂಟಿ ನಿರ್ದೇಶಕ ಕಚೇರಿ ಅಥವಾ ತರಬೇತುದಾರ ಪಿ.ವಿಜಯ್ ಕುಮಾರ್ ದೂರವಾಣಿ ಸಂಖ್ಯೆ 7760270058 ಗೆ ಸಂಪರ್ಕಿಸಬಹುದು. ತರಬೇತಿ ಕಾರ್ಯಕ್ರಮವು ಉಚಿತವಾಗಿದ್ದು, ತರಬೇತಿ ವೇಳೆಯಲ್ಲಿ ಊಟೋಪಚಾರ ಒದಗಿಸಲಾಗುವುದು. ಆಯ್ಕೆಯಾದ ಶಿಬಿರಾರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಪ್ರಯಾಣ ಮಾಡಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

### ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾಮಟ್ಟದ ಜಯದೇವ ಕಪ್ ಕ್ರೀಡಾಕೂಟ

» ಚಿತ್ರದುರ್ಗ

ಚಿತ್ರದುರ್ಗ ಮುರುಘರಾಜೇಂದ್ರ ಶ್ರೀಮಠದ ವತಿಯಿಂದ ಪ್ರತಿ ವರ್ಷ ದಸರಾ ಹಬ್ಬದ ಪ್ರಯುಕ್ತ ಶರಣಸಂಸ್ಕೃತಿ ಉತ್ಸವ ಆಚರಿಸಲಾಗುತ್ತಿದ್ದು, ಈ ವರ್ಷ ಶ್ರೀ ಜಯದೇವ ಮುರುಘರಾಜೇಂದ್ರ ಮಹಾ ಸ್ವಾಮೀಜಿಗಳ 150ನೇ ಜಯಂತಿ ಅಂಗವಾಗಿ ಜಯದೇವ ಕಪ್-2024 ಕ್ರೀಡಾ ಜಾತ್ರೆಯನ್ನು ಸಂಘಟಿಸಲಾಗುತ್ತಿದ್ದು, ಈ ಪ್ರಯುಕ್ತ ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಅ.4 ರಿಂದ 7 ರವರೆಗೆ ಜಿಲ್ಲಾ ಮಟ್ಟದ ಕ್ರೀಡಾ ವಿಭಾಗದಲ್ಲಿ ಸ್ಥಳೀಯ ಪ್ರತಿಭೆಗಳಿಗೆ ಸಹಕಾರಿಯಾಗುವಂತೆ ಪ್ರೌಢಶಾಲಾ ಬಾಲಕ, ಬಾಲಕಿಯರಿಗಾಗಿ (17ವರ್ಷ ಒಳಗಿನವರಿಗೆ) ಕಬಡ್ಡಿ, ಖೋ ಖೋ, ವಾಲಿಬಾಲ್ ಹಾಗೂ ಹ್ಯಾಂಡ್ ಬಾಲ್, ಹೊನಲು ಬೆಳಕಿನ ಪಂದ್ಯಾವಳಿಗಳನ್ನು ಆಯೋಜಿಸಲಾಗಿದೆ. ಈ ಪಂದ್ಯಾವಳಿಗಳಿಗೆ ಇಲಾಖೆಯಿಂದ ತಾಲ್ಲೂಕು ಮಟ್ಟದಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ತಂಡಗಳಿಗೆ ಅವಕಾಶ ಕಲ್ಪಿಸಲಾಗಿದೆ. ಹಾಗೆಯೇ ಹೊರ ತಾಲ್ಲೂಕುಗಳಿಂದ ಬರುವ ಕ್ರೀಡಾ ಪಟುಗಳಿಗೆ ವಸತಿ, ಊಟ, ತಿಂಡಿ, ವ್ಯವಸ್ಥೆ ಇದ್ದು, ಬಂದು ಹೋಗುವ ಪ್ರಯಾಣ ಭತ್ಯೆಯನ್ನು ಸಹ ನೀಡಲಾಗುವುದು. ಪಂದ್ಯಾವಳಿಯಲ್ಲಿ ಪ್ರಥಮ, ದ್ವಿತೀಯ, ತೃತೀಯ, ಚತುರ್ಥ ಸ್ಥಾನ ಪಡೆದ ತಂಡಗಳಿಗೆ ಕ್ರಮವಾಗಿ ರೂ.10,000, 8,000, 6,000, 4000 ನಗದು ಹಾಗೂ ಆಕರ್ಷಕ ಟ್ರೋಫಿ, ಮೆಡಲ್, ಟೀ ಷರ್ಟ್, ಕ್ರೀಡಾ ಪರಿಕರಗಳು ಮತ್ತು ವೈಯಕ್ತಿಕ ವಿಶೇಷ ಟ್ರೋಫಿ ಸಹ ನೀಡಲಾಗುತ್ತದೆ ಎಂದು ಪ್ರಕಟಣೆ ತಿಳಿಸಿದೆ.

### ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನ

# ಜಿಲ್ಲೆಯ ಎಲ್ಲ ಪ್ರವಾಸಿ ತಾಣಗಳ ಸ್ವಚ್ಛತೆ: ಎಡಿಸಿ

» ಚಿತ್ರದುರ್ಗ



ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನದಡಿ ಜಿಲ್ಲೆಯ ಎಲ್ಲ ಪ್ರವಾಸಿ ತಾಣಗಳನ್ನು ಸಾರ್ವಜನಿಕ ಸಹಭಾಗಿತ್ವದಲ್ಲಿ ಸ್ವಚ್ಛಗೊಳಿಸಲು ಅಗತ್ಯ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಪ್ರವಾಸೋದ್ಯಮ ಇಲಾಖಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನದ ಪ್ರಗತಿ ಪರಿಶೀಲನೆ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಲಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರವಾಸಿ ತಾಣಗಳು ನಮ್ಮ ದೇಶವನ್ನಷ್ಟೇ ಅಲ್ಲ ರಾಜ್ಯವನ್ನು ಕೂಡ ಪ್ರತಿನಿಧಿಸುತ್ತವೆ. ದೇಶ ವಿದೇಶಿಗರು ಪ್ರವಾಸಿ ತಾಣಗಳಿಗೆ ಬಂದಾಗ, ಸ್ವಚ್ಛ ವಾತಾವರಣದ ಅನುಭವ ಹೊಂದುವಂತಾಗಬೇಕು, ಅಗತ್ಯ ಮಾಹಿತಿ ದೊರಕುವಂತಿರಬೇಕು. ಈ ನಿಟ್ಟಿನಲ್ಲಿ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನದಡಿ ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲಾಗಿರುವ ಜಿಲ್ಲೆಯ ಎಲ್ಲ ಪ್ರವಾಸಿ ತಾಣಗಳಲ್ಲಿ ವಿವಿಧ ಇಲಾಖೆಗಳು, ಸಾರ್ವಜನಿಕರು, ಸಂಘ ಸಂಸ್ಥೆಗಳು, ಸಮುದಾಯದ ಸಹಭಾಗಿತ್ವದೊಂದಿಗೆ ಸ್ವಚ್ಛತಾ ಅಭಿಯಾನ ಕಾರ್ಯಕ್ರಮ ರೂಪಿಸಬೇಕು. ಚಿತ್ರದುರ್ಗದ ಐತಿಹಾಸಿಕ ಕೋಟೆ, ಚಂದ್ರವಳ್ಳಿ ಸೇರಿದಂತೆ ವಿವಿಧ ಪ್ರಮುಖ ಪ್ರವಾಸಿ ತಾಣಗಳು ಈ ಪಾಕ್ಷಿಕ ಅಭಿಯಾನದಡಿ ಸ್ವಚ್ಛವಾಗಬೇಕು ಎಂದು ಪ್ರವಾಸೋದ್ಯಮ ಇಲಾಖಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ನಗರ, ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿನ ವಾಸಸ್ಥಳಗಳಲ್ಲಿರುವ ಖಾಲಿ ನಿವೇಶನಗಳು ಕಸ ಸಂಗ್ರಹಿಸುವ ತಾಣಗಳಾತ್ತಿದ್ದು, ಇದಕ್ಕೆ ಕಡಿವಾಣ ಹಾಕುವುದು ಅಗತ್ಯವಾಗಿದೆ. ಖಾಲಿ ನಿವೇಶನದಲ್ಲಿ ಕಸದ ರಾಶಿ ಕಂಡುಬರುತ್ತಿದ್ದು, ಇದರಿಂದಲೂ ನಗರದ ಸ್ವಚ್ಛತೆಗೆ ತೀವ್ರ ಸಮಸ್ಯೆಯಾಗುತ್ತದೆ, ಅಲ್ಲದೆ ಇಂತಹ ತಾಣಗಳಲ್ಲಿ ಹಾವು ಸೇರಿದಂತೆ ಇತರೆ ವಿಷಕಾರಿ ಜಂತುಗಳು ಸೇರಿಕೊಂಡು, ಜನರಿಗೆ ತೊಂದರೆ ಕೊಡುವ ಸಾಧ್ಯತೆಗಳು ಹೆಚ್ಚಾಗಿರುತ್ತದೆ. ವಾಸಸ್ಥಳದಲ್ಲಿ ಖಾಲಿ ನಿವೇಶನಗಳನ್ನು ಸ್ವಚ್ಛವಾಗಿರಿಸುವುದು ಸಂಬಂಧಪಟ್ಟ ನಿವೇಶನಗಳ ಮಾಲೀಕರ ಜವಾಬ್ದಾರಿಯಾಗಿರುತ್ತದೆ. ಒಂದು ವೇಳೆ ಮಾಲೀಕರು ಸ್ವಚ್ಛಗೊಳಿಸದಿದ್ದರೆ, ಸಂಬಂಧಿಸಿದ ಸ್ಥಳೀಯ ಸಂಸ್ಥೆಯಿಂದಲೇ ಸ್ವಚ್ಛಗೊಳಿಸಿ, ಕಾಯ್ದೆಯನುಸಾರ ಮಾಲೀಕರ ವಿರುದ್ಧ ಕ್ರಮ ಕೈಗೊಂಡು, ದಂಡ ಹಾಗೂ ಸ್ವಚ್ಛತಾ ವೆಚ್ಚ ವಸೂಲಿ ಮಾಡುವಂತೆ ಸೂಚನೆ ನೀಡಿದರು.

ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಕೆಲವೆಡೆ ಅವೈಜ್ಞಾನಿವಾಗಿ ಚರಂಡಿ ನಿರ್ಮಿಸಿರುವುದರಿಂದ, ನೀರು ಸರಾಗವಾಗಿ ಹರಿದುಹೋಗದೆ, ಮಳೆಯ ನೀರು ಹಾಗೂ ಕಸ, ತ್ಯಾಜ್ಯ ಎಲ್ಲವೂ ರಸ್ತೆಯ ಮೇಲೆಯೇ ನಿಂತು ಅನೈರ್ಮಲ್ಯಕ್ಕೆ ಕಾರಣವಾಗುತ್ತಿದೆ. ನಗರದಲ್ಲಿನ ಎಲ್ಲ ರಾಜಕಾಲುವೆಗಳನ್ನು ಸ್ವಚ್ಛಗೊಳಿಸುವ ಕಾರ್ಯ ಆಗಬೇಕು, ಹಾಗೂ ಗ್ರಾಮಗಳಲ್ಲಿಯು ಕೂಡ ಗ್ರಾಮ ಪಂಚಾಯತಿಗಳು ಚರಂಡಿಯನ್ನು ನಿಯಮಿತವಾಗಿ ಸ್ವಚ್ಛಗೊಳಿಸಬೇಕು. ಅಧಿಕಾರಿಗಳು ಸಮರ್ಪಣಾ ಮನೋಭಾವದಿಂದ ಕೆಲಸ ಮಾಡಿದರೆ ಮಾತ್ರ ಸ್ವಚ್ಛತೆ ಇರಲು ಸಾಧ್ಯ, ನಮ್ಮೂರು, ನಮ್ಮ ಗ್ರಾಮ, ನಮ್ಮ ಬೀದಿ ಎಂಬ ಮನೋಭಾವ ಜನರಲ್ಲಿ ಬರಬೇಕು, ಇದಕ್ಕಾಗಿಯೇ ಸ್ವಚ್ಛತಾ ಹೀ ಸೇವಾ ಪಾಕ್ಷಿಕದಡಿ ಜನರಲ್ಲಿ ಜಾಗೃತಿ ಮೂಡಿಸಬೇಕು, ಶಾಲೆಗಳಲ್ಲಿ ಮಕ್ಕಳಿಗೆ ಸ್ವಚ್ಛತೆಯ ಮಹತ್ವದ ಬಗ್ಗೆ ಅರಿವು ಮೂಡಿಸಬೇಕು, ಪ್ಲಾಸ್ಟಿಕ್ ಬಳಕೆಯನ್ನು ನಿಲ್ಲಿಸಬೇಕು, ಪ್ಲಾಸ್ಟಿಕ್ ನಿಷೇಧವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ತಾಕೀತು ಮಾಡಿದರು.ಜಿಲ್ಲೆಯ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಜಿಲ್ಲಾಸ್ಪತ್ರೆ ಸೇರಿದಂತೆ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ನಿಯಮಾನುಸಾರ ವೈದ್ಯಕೀಯ ತ್ಯಾಜ್ಯವನ್ನು ಹಾಗೂ ಅವಧಿ ಮೀರಿದ ಔಷಧಿಗಳನ್ನು ವಿಲೇವಾರಿ ಮಾಡಬೇಕು, ಆಸ್ಪತ್ರೆಗಳ ಆವರಣವನ್ನು ಸ್ವಚ್ಛವಾಗಿರಿಸಿಕೊಳ್ಳಬೇಕು, ಅಲ್ಲದೆ ಸಾಧ್ಯವಾದಷ್ಟು ಗಿಡಗಳನ್ನು ನೆಟ್ಟು ಉತ್ತಮ ಪರಿಸರ ಕಾಯ್ದುಕೊಳ್ಳಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಡಿಡಿಪಿಐ ಮಂಜುನಾಥ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಶಶಿಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಾಣಂತಿಯರಿಗೆ ಪೋಷಣೆಯುಕ್ತ ಆಹಾರ ಅವಶ್ಯ

» ಚಿತ್ರದುರ್ಗ



ಗರ್ಭಿಣಿ ಹಾಗೂ ಬಾಣಂತಿಯರಿಗೆ ಪೋಷಣೆಯುಕ್ತ ಆಹಾರ ಅವಶ್ಯಕತೆಯಿದೆ ಎಂದು ವೃತ್ತ ಮೇಲ್ವಿಚಾರಕರು ಪುಷ್ಪಾ.ಡಿ ಹೇಳಿದರು.

ಭರಮಸಾಗರ ಶಿಶು ಅಭಿವೃದ್ಧಿ ಯೋಜನೆ, ಮಹಿಳಾ ಸಬಲೀಕರಣ ಘಟಕ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಮುಕ್ತಿ ವಿದ್ಯಾಸಂಸ್ಥೆ ಚಿತ್ರದುರ್ಗ ಇವರ ಸಹಯೋಗದಲ್ಲಿ, ಮಂಗಳವಾರ ತಾಲ್ಲೂಕಿನ ಕ್ಯಾಸಾಪುರ ಹಟ್ಟಿಯಲ್ಲಿ ಹಮ್ಮಿಕೊಳ್ಳಲಾದ ಪೋಷಣ್ ಮಾಸಾಚರಣೆ ಮತ್ತು ಮಾತೃವಂದನಾ ವಿಶೇಷ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಏಕದಳ ಧಾನ್ಯಗಳು ದ್ವಿದಳ ಧಾನ್ಯಗಳು ಮೊಳಕೆ ಕಾಳುಗಳು ಹಣ್ಣುಗಳು ಸೊಪ್ಪುಗಳು ತರಕಾರಿಗಳು ಮೊಟ್ಟೆ, ಹಾಲುನ್ನು ಗರ್ಭಿಣಿ ಹಾಗೂ ಬಾಣಂತಿಯರು ಹೆಚ್ಚು ಹೆಚ್ಚು ಸೇವಿಸಬೇಕು ಎಂದರು.

ಬಾಲ್ಯ ವಿವಾಹ ಎಂಬುದು ಶಿಕ್ಷಾರ್ಹ ಅಪರಾಧವಾಗಿದೆ. ಚಿಕ್ಕ ವಯಸ್ಸಿಗೆ ಬಾಲ್ಯ ವಿವಾಹ ಮಾಡುವುದರಿಂದ ಮಕ್ಕಳಲ್ಲಿ ಮಾನಸಿಕ ಸಮಸ್ಯೆಗಳು ತಲೆದೋರುತ್ತವೆ. ಬಾಲ್ಯ ವಿವಾಹ ಸಾಮಾಜಿಕ ಪಿಡುಗಾಗಿದೆ. ಸ್ಥಳೀಯವಾಗಿ ಹಲವು ಬಾಲ್ಯ ವಿವಾಹ ಪ್ರಕರಣಗಳು ದಾಖಲಾಗಿದ್ದು, ಸಂಬಂಧ ಪಟ್ಟವರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಂಡು ಪೊಲೀಸ್ ಪ್ರಕರಣ ದಾಖಲಿಸಲಾಗಿದೆ ಎಂದು ಪುಷ್ಪಾ.ಡಿ ತಿಳಿಸಿದರು.

ಜಿಲ್ಲಾ ಸಂಯೋಜಕ ಚೇತನ್ ಎಂ.ಎಸ್ ಮಾತನಾಡಿ ತಮ್ಮ ರಾಷ್ಟ್ರ ಧ್ವಜವನ್ನು ಉಲ್ಲೇಖಿಸಿ ದೈನಂದಿನ ಆಹಾರದ ಕ್ರಮದ ಬಗ್ಗೆ ಹಾಗೂ ಆರೋಗ್ಯ ಕಾಪಾಡಿಕೊಳ್ಳಲು ಮಾಡಬೇಕಾದ ಕೆಲಸಗಳ ಬಗ್ಗೆ ಮತ್ತು ಬಾಲ್ಯವಿವಾಹ, ಬಾಲಕಾರ್ಮಿಕತೆ, ಬಾಲತಾಯಂದಿರ ಪ್ರಕರಣಗಳು ಪೋಕ್ಸೋ ಕಾಯ್ದೆ, ಇವೆಲ್ಲದರ ಬಗ್ಗೆ ಕತೆಗಳ ಮೂಲಕ ಮಕ್ಕಳಿಗೆ ಮತ್ತು ಗ್ರಾಮಸ್ಥರಿಗೆ ಅರಿವು ಮೂಡಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಎಲ್ಲಾ ಯೋಜನೆಗಳ ಬಗ್ಗೆ ಸೂಕ್ತ ಮಾಹಿತಿ ಒದಗಿಸಿದರು.

ಬಾಲ್ಯ ವಿವಾಹಕ್ಕೆ ಸಂಬಂಧಿಸಿದ ಕೆಲವು ವಿಡಿಯೋ ತುಣುಕುಗಳು ಮತ್ತು ಬಾಲ್ಯ ವಿವಾಹಕ್ಕೆ ಸಂಬಂಧಿಸಿದ ಮಾಹಿತಿಯನ್ನು ಪಿಪಿಟಿ ಮೂಲಕ ಕಾರ್ಯಕ್ರಮದಲ್ಲಿ ಪ್ರಸ್ತುತ ಪಡಿಸಲಾಯಿತು.

ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ, ಪಿಎಂಎಂವಿವೈ ಫಲಾನುಭವಿಗಳ ಅರ್ಜಿಗಳನ್ನು ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಗ್ರಾ.ಪಂ.ಸದಸ್ಯರಾದ ವೀರಭದ್ರಪ್ಪ, ರಮೇಶ್ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹೈಮಾವತಿ, ತಾಲ್ಲೂಕು ಸಂಯೋಜಕ ರಂಗಸ್ವಾಮಿ ಪಿಎಂಎಂವಿವೈ ಜಿಲ್ಲಾ ಸಂಯೋಜಕ ಚೇತನ್.ಎಂ.ಎಸ್, ವಿಮುಕ್ತಿ ವಿದ್ಯಾಸಂಸ್ಥೆಯ ಅಧ್ಯಕ್ಷೆ ಅನ್ನಪೂರ್ಣ, ಅರಣ್ಯ ಸಾಗರ್, ಮುಖ್ಯೋಪಾಧ್ಯಾಯ ಸತ್ಯಣ್ಣ ಸಹ ಶಿಕ್ಷಕರಾದ ಗೋಪಿನಾಥ್, ಕ್ಯಾಸಾಪುರ ವೃತ್ತದ ಅಂಗನವಾಡಿ ಕಾರ್ಯಕರ್ತರು ಕ್ಯಾಸಾಪುರ ಗ್ರಾಮದ ಗ್ರಾಮಸ್ಥರು, ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳು ಇದ್ದರು.

## ಕಾಂಗ್ರೆಸ್ ಮಹಿಳಾ ಘಟಕದ ಸದಸ್ಯತ್ವ ಅಭಿಯಾನಕ್ಕೆ ಚಾಲನೆ



» ಚಳ್ಳಕೆರೆ

ರಾಜಕೀಯ ಕ್ಷೇತ್ರದಲ್ಲೂ ಸಹ ಮಹಿಳೆ ಉತ್ತಮವಾಗಿ ಜನರ ಸೇವೆ ಮಾಡಬಲ್ಲಳು ಹಾಗೂ ಆಡಳಿತವನ್ನು ನಡೆಸಬಲ್ಲಳು ಎಂಬುವುದನ್ನು ನಿರೂಪಿಸಿದವರು ಕಾಂಗ್ರೆಸ್ ಪಕ್ಷದ ಅಧಿನಾಯಕಿ, ಎಐಸಿಸಿ ಮಾಜಿ ಅಧ್ಯಕ್ಷೆ, ಮಾಜಿ ಪ್ರಧಾನಿ ದಿವಂಗತ ಇಂದಿರಗಾಂಧಿಯವರು. ಇಂದಿಗೂ ಇಂದಿರಗಾಂಧಿಯವರ ಆದರ್ಶಗಳು ಮಹಿಳಾ ಸಂಘಟನೆಗೆ ಸ್ಪೂರ್ತಿಯಾಗಿದೆ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಗೀತಾನಂದಿನಿಗೌಡ ತಿಳಿಸಿದರು. ಅವರು, ಮಂಗಳವಾರ ನಗರದ ಶಾಸಕರ ಭವನದ ಆವರಣದಲ್ಲಿ ಚಳ್ಳಕೆರೆ ಮತ್ತು ಪರಶುರಾಮಪುರ ಹೋಬಳಿ ಮಟ್ಟದ ಮಹಿಳಾ ಕಾಂಗ್ರೆಸ್ ಘಟಕ ಸದಸ್ಯತ್ವ ನೊಂದಾವಣೆ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ರಾಜಕೀಯ ಕ್ಷೇತ್ರವನ್ನು ಆಯ್ಕೆ ಮಾಡಿಕೊಳ್ಳಲು ಈ ಹಿಂದೆ ಮಹಿಳೆಯರು ಮುಂದುಬರುತ್ತಿರಲಿಲ್ಲ. ಆದರೆ, ರಾಷ್ಟ್ರದ ಪ್ರಧಾನಮಂತ್ರಿಯಾಗಿ ಸುಧೀರ್ಘಕಾಲ ಆಡಳಿತ ನಡೆಸಿ ಇಂದಿರಗಾಂಧಿಯವರ ರಾಜಕೀಯ ಜಾಣ್ಮೆ, ಸಾಮಾಜಿಕ ಕಳಕಳಿ, ಬಡವರ ಬಗ್ಗೆ ಅವರಿಗೆ ಇದ್ದ ಅನುಕಂಪ ವಿಶೇಷವಾಗಿ ಬಡತನ ನಿರ್ಮೂಲನೆಗಾಗಿ ಜಾರಿಗೆ ತಂದ 20 ಅಂಶಗಳ ಕಾರ್ಯಕ್ರಮ ಅವರನ್ನು ರಾಷ್ಟ್ರೀಯ ನಾಯಕಿಯನ್ನಾಗಿ ರೂಪಿಸಿತು. ಎಲ್ಲಾ ಮಹಿಳಾ ಕಾರ್ಯಕರ್ತರು ಇದಕ್ಕೆ ಸ್ಪೂರ್ತಿಯಾಗಿ ಇಟ್ಟುಕೊಂಡು ತಮ್ಮ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಿ ಎಂದು ಕರೆ ನೀಡಿದರು.

ಪುಸರಭೆ ಮಾಜಿ ಸದಸ್ಯೆ ಲಕ್ಷ್ಮಿದೇವಿ, ಬಿ.ಎಂ.ಭಾಗ್ಯಮ್ಮ ಮಾತನಾಡಿ, ಮಹಿಳೆಯರ ಸಂಘಟನೆಯ ಬಗ್ಗೆ ಹೆಚ್ಚು ಒತ್ತು ನೀಡುವ ರಾಜಕೀಯ ಪಕ್ಷಗಳಲ್ಲಿ ಕಾಂಗ್ರೆಸ್ ಪಕ್ಷ ಸದಾಮುಂದು. ಯಾವುದೇ ಚುನಾವಣೆಯನ್ನು ಗೆಲ್ಲಬೇಕಾದರೆ ಮಹಿಳೆಯರ ಸಹಕಾರ ಇರಬೇಕು. ವಿಶೇಷವಾಗಿ ಕಾಂಗ್ರೆಸ್ ಪಕ್ಷ ಮಹಿಳೆಯರ ಸಬಲೀಕರಣಕ್ಕೆ ಒತ್ತು ನೀಡಿದ ಹಿನ್ನೆಲೆಯಲ್ಲಿ ಮಹಿಳೆಯರು ಹೆಚ್ಚಾಗಿ ಎಲ್ಲಾ ಚುನಾವಣೆಯಲ್ಲೂ ಕಾಂಗ್ರೆಸ್ ಪಕ್ಷವನ್ನು ಆಯ್ಕೆ ಮಾಡುತ್ತಿದ್ದಾರೆಂದರು.

### ನವೋದಯ ಶಾಲೆ ಪ್ರವೇಶಕ್ಕೆ ಅ.07 ವರೆಗೆ ಕಾಲಾವಕಾಶ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಉಡುವಳ್ಳಿ ಜವಾಹರ್ ನವೋದಯ ವಿದ್ಯಾಲಯದಲ್ಲಿ 2025-26ನೇ ಸಾಲಿಗೆ 6ನೇ ತರಗತಿಯ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕವನ್ನು ಅ.07 ವರೆಗೆ ವಿಸ್ತರಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಉಚಿತವಾಗಿ ನವೋದಯ ವಿದ್ಯಾಲಯ ಸಮಿತಿಯ ವೆಬ್ ಸೈಟ್ ʇttps://cbseitms.rcil.gov.in/nvs/Index/Registration ಮೂಲಕ ಸಲ್ಲಿಸಬಹುದು ಎಂದು ಪ್ರಾಂಶುಪಾಲ ರತನ್‌ಕುಮಾರ್ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಬಾಲಕರು, ಅಲ್ಪ ವಯಸ್ಕರ ಬಗೆಗಿನ ಕಾನೂನು ತಿಳಿಯುವುದು ಎಲ್ಲರ ಜವಾಬ್ದಾರಿ; ಅಣ್ಣಯ್ಯನವರ್

» ದಾವಣಗೆರೆ






ಬಾಲಕರ ಮತ್ತು ಅಲ್ಪ ವಯಸ್ಕರ ಬಗೆಗಿನ ಕಾನೂನು ತಿಳಿಯುವುದು ಎಲ್ಲರ ಜವಾಬ್ದಾರಿ ಎಂದು ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಅಣ್ಣಯ್ಯನವರ್ ತಿಳಿಸಿದರು.

ಅವರು (ಸೆ.23) ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ ಮತ್ತು ಅಮೃತ ವಿದ್ಯಾಲಯಂ, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಸೋಮುವಾರ ಹಮ್ಮಿಕೊಳ್ಳಲಾಗಿದ್ದ. ಪೋಕ್ಸೋ ಮತ್ತು ಬಾಲ್ಯ ವಿವಾಹ ತಡೆಯುವ ಬಗ್ಗೆ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿ, ವಿದ್ಯಾರ್ಥಿನಿಯರ ತಂದೆ ತಾಯಿಯರು ಮಕ್ಕಳನ್ನು ಶಾಲೆಗೆ ಕಳುಹಿಸಿದ ನಂತರ ಅವರ ಬಗ್ಗೆ ಕಾಳಜಿ ವಹಿಸುವುದು ಅವಶ್ಯವಾಗಿದೆ ಎಂದು ತಿಳಿಸಿದರು.

ಕಾನೂನಿನ ಸಂಘರ್ಷಕ್ಕೆ ಒಳಗಾದರೆ ಆರ್ಥಿಕವಾಗಿ, ಸಾಮಾಜಿಕವಾಗಿ ಅಷ್ಟೇ ಅಲ್ಲದೆ ಭೌತಿಕವಾಗಿ ಕೂಡ ತೊಂದರೆಗಳನ್ನು ಅನುಭವಿಸಬೇಕಾಗುತ್ತದೆ ಎಂದು ತಿಳಿಸಿದರು. ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ.ಕರೆಣ್ಣವರ್ ಮಾತನಾಡಿ ಮಕ್ಕಳಿಗೆ ನೈತಿಕ ಶಿಕ್ಷಣ ಅವಶ್ಯಕತೆ ಇದೆ, ಮಕ್ಕಳು ಮೊಬೈಲ್‌ಗಳಲ್ಲಿ ಅವಶ್ಯಕತೆಗಿಂತ ಅನಾವಶ್ಯಕ ವಿಷಯಗಳ ಬಗ್ಗೆ ಹೆಚ್ಚಿನ ಮಾಹಿತಿ ಹೊಂದಿದ್ದಾರೆ. ಆದ್ದರಿಂದ ಪೋಷಕರು ಇದರ ಬಗ್ಗೆ ಹೆಚ್ಚಿನ ಗಮನಿಸಬೇಕು ಎಂದು ತಿಳಿಸಿದರು.

ಪೋಕ್ಸೋ ಕಾನೂನು ಮತ್ತು ಬಾಲ್ಯ ವಿವಾಹ ನಿಷೇಧ ಕಾನೂನು ಬಗ್ಗೆ ಮಾಹಿತಿ ನೀಡಿ, ಇಲಾಖೆಗಳ ಜೊತೆಗೆ ಮಕ್ಕಳು, ಪೋಷಕರು ಮತ್ತು ಸಾರ್ವಜನಿಕರು ಕೈಜೋಡಿಸಿದಾಗ ಮಾತ್ರ ಕಾನೂನಿನ ಅನುಷ್ಠಾನ ಸುಲಭ ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಲತಾ ಮಾತನಾಡಿ ಪಠ್ಯ ವಿಷಯದ ಜೊತೆಗೆ ಸಾಮಾಜಿಕ ಮೌಲ್ಯಗಳು ಮತ್ತು ದಿನ ಬಳಕೆ ಕಾನೂನುಗಳನ್ನು ಮಕ್ಕಳಿಗೆ ತಿಳಿಸಿಕೊಡುವುದು ಶಿಕ್ಷಕರ ಮತ್ತು ಶಿಕ್ಷಣ ಸಂಸ್ಥೆಗಳ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ಮಹಿಳಾ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಎಸ್.ಡಿ. ನೂರ್ ಅಹಮ್ಮದ್ ಮಾತನಾಡಿ ಸಾರ್ವಜನಿಕರು ಪೊಲೀಸರಿಗೆ ಸೂಕ್ತ ಸಮಯದಲ್ಲಿ ಸರಿಯಾದ ಮಾಹಿತಿ ನೀಡಿ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಸಹಾಯ ಮಾಡಿ ಎಂದು ಮನವಿ ಮಾಡಿದರು. ಕಾರ್ಯಕ್ರದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ ಟಿ.ಎನ್ , ಅಮೃತ ವಿದ್ಯಾಲಯಂ ಪ್ರಾಂಶುಪಾಲರಾದ ಪ್ರತಿಭಾ ಎನ್, ಅಮೃತ ಪಿ.ಯು.ಕಾಲೇಜಿನ ಪ್ರಾಂಶುಪಾಲರಾದ ಡಾ.ಎನ್.ಸಿ.ವಿವೇಕ್, ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಉನ್ನತಿ ಗ್ರಾಮ ಅಭಿಯಾನ ಯೋಜನೆಗೆ ಜಿಲ್ಲೆಯ 44 ಗ್ರಾಮಗಳ ಆಯ್ಕೆ

» ದಾವಣಗೆರೆ

ಕೇಂದ್ರ ಬುಡಕಟ್ಟು ಮಂತ್ರಾಲಯದಿಂದ ಅಕ್ಟೋಬರ್ 2 ರಂದು ಪ್ರಧಾನಮಂತ್ರಿ ಜನಜಾತಿಯ ಉನ್ನತಿ ಗ್ರಾಮ ಅಭಿಯಾನ ಯೋಜನೆಯನ್ನು ಘೋಷಿಸಲಿದ್ದು. ಜಿಲ್ಲೆಯ 44 ಗ್ರಾಮಗಳು ಈ ಯೋಜನೆಯಡಿ ಆಯ್ಕೆಯಾಗಲಿವೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ. ಆಯ್ಕೆಯಾದ ಗ್ರಾಮಗಳಲ್ಲಿ ದಾವಣಗೆರೆ ತಾ; 7 ಗ್ರಾಮಗಳು, ಜಗಳೂರು ತಾಲ್ಲೂಕಿನ 24 ಗ್ರಾಮಗಳು. ನ್ಯಾಮತಿ ತಾಲ್ಲೂಕಿನ 1 ಗ್ರಾಮ, ಹೊನ್ನಾಳಿಯ 1 ಗ್ರಾಮ, ಚನ್ನಗಿರಿ ತಾಲ್ಲೂಕಿನ 9 ಗ್ರಾಮ. ಹರಿಹರ ತಾಲ್ಲೂಕಿನ 2 ಗ್ರಾಮಗಳು ಸೇರಿವೆ. ಈ ಯೋಜನೆಯಲ್ಲಿ ರೂ.8.05 ಲಕ್ಷ ಪರಿಶಿಷ್ಟ ಪಂಗಡದ ಜನರಿಗೆ ಉಪಯೋಗವಾಗುವಂತಹ ವಿವಿಧ 17 ಇಲಾಖೆಗಳು, 25 ಪ್ರಮುಖ ವಿಷಯಗಳನ್ನು ಒಳಗೊಂಡಿರುತ್ತದೆ. ಪರಿಶಿಷ್ಟ ಪಂಗಡದ ಜನರು ಹೆಚ್ಚು ವಾಸಿಸುವ ಗ್ರಾಮಗಳನ್ನು ಈ ಯೋಜನೆಯಡಿ ಆಯ್ಕೆ ಮಾಡಲಾಗಿರುತ್ತದೆ. ಆಯ್ಕೆಯಾದ ಗ್ರಾಮಗಳಲ್ಲಿ ಸಂಪರ್ಕ ರಸ್ತೆ ಅಭಿವೃದ್ಧಿ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುದೀಕರಣ, ಮನೆ ನಿರ್ಮಾಣ, ಆರೋಗ್ಯ ಯೋಜನೆಗಳ ಅನುಷ್ಠಾನ ಪರಿಶಿಷ್ಟ ವರ್ಗದವರಿಗೆ ಶಿಕ್ಷಣ, ಸೋಲಾರ್ ವ್ಯವಸ್ಥೆ, ಕೃಷಿ ಮತ್ತು ತೋಟಗಾರಿಕೆ ಯೋಜನೆಗಳ ಅನುಷ್ಠಾನ ಮತ್ತು ಮೊಬೈಲ್ ಹಾಗೂ ಇಂಟರ್‌ನೆಟ್ ಸಂಪರ್ಕ ಮುಂತಾದ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತದೆ.

### ವಿಶೇಷಚೇತನರ ಕ್ಷೇತ್ರದಲ್ಲಿ ಸೇವೆಗೈದವರಿಗೆ ಪ್ರಶಸ್ತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ವಿಶ್ವ ವಿಕಲಚೇತನರ ದಿನಾಚರಣೆಯ ಅಂಗವಾಗಿ ಪ್ರಸಕ್ತ ಸಾಲಿನಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಗಳಲ್ಲಿ 15 ವರ್ಷಗಳಿಗೂ ಹೆಚ್ಚು ಕಾಲ ಸೇವೆ ಸಲ್ಲಿಸುತ್ತಿರುವ, ಸಲ್ಲಿಸಿರುವ ವಿಶೇಷ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲು ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿಯನ್ನು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿಗಳ ಕಚೇರಿ, ಎಂ.ಸಿ.ಸಿ. ಬಿ. ಬ್ಲಾಕ್, ಶಂಕ[illegible]ಲೀಲಾ ಗ್ಯಾಸ್ ಏಜೆನ್ಸಿ ಹತ್ತಿರ, ದಾವಣಗೆರೆ ಇಲ್ಲಿ ಪಡೆದು ಅಕ್ಟೋಬರ್ 15 ರೊಳಗಾಗಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ 08192-263936, 263939 ಗೆ ಕರೆ ಮಾಡಲು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ.ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

### ದಾಖಲಾತಿ ಪರಿಶೀಲನೆ ಅವಧಿ ವಿಸ್ತರಣೆ

» ದಾವಣಗೆರೆ

ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನಾ ದಿನವನ್ನು ಸೆಪ್ಟೆಂಬರ್ 25 ರ ಬದಲು ಅಕ್ಟೋಬರ್ 9 ಕ್ಕೆ ಮುಂದೂಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ್ ತಿಳಿಸಿದ್ದಾರೆ.

### ಎನ್‌ಬಿಎ ಮಾನ್ಯತೆ

» ದಾವಣಗೆರೆ

ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿಯ ಹರಿಹರ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಸಂಸ್ಥೆಯಲ್ಲಿ ಡಿಪ್ಲೊಮಾ ಇನ್ ಟೂಲ್ ಮತ್ತು ಡೈ ಮೇಕಿಂಗ್ ಕೋರ್ಸ್‌ಗೆ ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ ಎನ್.ಬಿ.ಎ ಮಾನ್ಯತೆ ನೀಡಿದೆ ಎಂದು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಪ್ರಾಂಶುಪಾಲರು ತಿಳಿಸಿದ್ದಾರೆ.

### ಮಂಜುನಾಥ್ ಮಾಗೋದಿ ಕನಕ ಗುರುಪೀಠದ ಪ್ರಧಾನ ಕಾರ್ಯದರ್ಶಿ

» ಹೊಸದುರ್ಗ



ಶ್ರೀ ಕಾಗಿನೆಲೆ ಮಹಾ ಸಂಸ್ಥಾನ ಕನಕ ಗುರುಪೀಠದ ಪ್ರಧಾನ ಕಾರ್ಯದರ್ಶಿಯಾಗಿ ಮಂಜುನಾಥ್‌ಮಾಗೋದಿ ನೇಮಕಗೊಂಡಿದ್ದಾರೆ.

ಶ್ರೀ ಕಾಗಿನೆಲೆ ಮಹಾ ಸಂಸ್ಥಾನ ಕನಕ ಗುರುಪೀಠದ ಜಗದ್ಗುರು ಶ್ರೀ ನಿರಂಜನಾನಂದಪುರಿ ಸ್ವಾಮೀಜಿಗಳ ಅಧ್ಯಕ್ಷತೆ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಸೆ.23 ರಂದು ಸೋಮವಾರ ನಡೆದ ಶ್ರೀ ಕಾಗಿನೆಲೆ ಮಹಾ ಸಂಸ್ಥಾನ ಕನಕ ಗುರುಪೀಠದ ಟ್ರಸ್ಟ್ ಸಭೆಯಲ್ಲಿ ನೇಮಕ ಮಾಡಲಾಯಿತು. ಮಂಜುನಾಥ್ ಅವರು ಮೂಲತಹ ಹೊಸದುರ್ಗ ತಾಲೂಕಿನ ಎಂ.ಜಿ.ದಿಬ್ಬ ಗ್ರಾಮದವರು.

# ಮೀಸಲಾತಿ, ರೋಸ್ಟರ್ ನಿಯಮ ಸಡಿಲಿಕೆಗೆ ಸರ್ಕಾರಕ್ಕೆ ಮನವಿ; ಜಿ.ಎಸ್.ಮಂಜುನಾಥ

» ಚಿತ್ರದುರ್ಗ



ಪೌರಕಾರ್ಮಿಕರ ನೇಮಕಾತಿಗೆ ನಿಗದಿಪಡಿಸಿರುವ ಮೀಸಲಾತಿ ಹಾಗೂ ರೋಸ್ಟರ್ ನಿಯಮ ಸಡಿಲಿಕೆ ಮಾಡುವಂತೆ ಸರ್ಕಾರಕ್ಕೆ ಮನವಿ ಮಾಡುವುದಾಗಿ ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ ಹೇಳಿದರು.

ಚಿತ್ರದುರ್ಗ ನಗರಸಭೆ ವತಿಯಿಂದ ರಾಜೇಂದ್ರ ನಗರದ ಅಂಬೇಡ್ಕರ್ ಕಲ್ಯಾಣ ಮಂಟಪ ಆವರಣದಲ್ಲಿ ಆಯೋಜಿಸಲಾದ ಪೌರಕಾರ್ಮಿಕ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶೇ.99 ರಷ್ಟು ಪರಿಶಿಷ್ಟ ಜಾತಿ ಜನರೇ ಪೌರ ಕಾರ್ಮಿಕ ಕೆಲಸ ಮಾಡುತ್ತಾರೆ. ಪರಿಶಿಷ್ಟ ಜಾತಿಯಲ್ಲೂ ಅತಿ ಹಿಂದುಳಿದ ಜಾತಿ ಜನರು ಮಾತ್ರ ಹೆಚ್ಚಾಗಿ ಪೌರಕಾರ್ಮಿಕ ವೃತ್ತಿಯನ್ನು ಆಯ್ದುಕೊಳ್ಳುತ್ತಾರೆ. ಇಂತಹ ಸಂದರ್ಭದಲ್ಲಿ ಪೌರ ಕಾರ್ಮಿಕರ ನೇಮಕಾತಿಯಲ್ಲಿ ಜಾತಿ, ಮಹಿಳಾ ಮತ್ತು ಅಂಗವಿಕಲರ ಆಧಾರಿತ ಮೀಸಲಾತಿ ಹಾಗೂ ರೋಸ್ಟರ್ ನಿಯಮ ಅನ್ವಯಿಸುವುದರಿಂದ ಬಹಳಷ್ಟು ಪೌರಕಾರ್ಮಿಕ ಹುದ್ದೆಗಳು ಭರ್ತಿಯಾಗದೇ ಉಳಿಯುತ್ತವೆ. ನಗರಗಳಲ್ಲಿ ಪೌರಕಾರ್ಮಿಕ ಸಮಸ್ಯೆ ತಲೆದೋರುತ್ತದೆ. ಈಗಾಗಲೇ ನೇರ ಪಾವತಿಯಡಿ ಕೆಲಸ ಮಾಡುತ್ತಿರುವ ಪೌರಕಾರ್ಮಿಕರನ್ನು ಸಹ ಖಾಯಂ ನೇಮಕಾತಿ ಮಾಡಲು ಅಡಚಣೆ ಉಂಟಾಗುತ್ತಿದೆ ಎಂದರು. ಪೌರಕಾರ್ಮಿಕರ ನೇಮಕಾತಿಯಲ್ಲಿನ ತೊಂದರೆಗಳ ಬಗ್ಗೆ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಿಂದ ವರದಿ ಪಡೆದು, ಸೆ.27 ರಂದು ಬೀದರ್ ನಲ್ಲಿ ನಡೆಯಲಿರುವ ಪೌರಕಾರ್ಮಿರ ದಿನಾಚರಣೆ ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರೊಂದಿಗೆ ಚರ್ಚಿಸುವುದಾಗಿ ಜಿ.ಎಸ್.ಮಂಜುನಾಥ ಹೇಳಿದರು. ಪೌರ ಕಾರ್ಮಿಕ ಸಮಸ್ಯೆಗಳನ್ನು ಬಗೆಹರಿಸುವುದು ನಗರಸಭೆ ಸದಸ್ಯರು, ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಕೆಲಸವಾಗಿದೆ. ಸ್ವಚ್ಚತೆ ಹಾಗೂ ಜನರ ಆರೋಗ್ಯ ರಕ್ಷಣೆ ನಗರ ಸಭೆಯ ಆದ್ಯ ಕರ್ತವ್ಯವಾಗಿದೆ. ಘನ ತ್ಯಾಜ್ಯ ನಿರ್ವಹಣೆ ವ್ಯವಸ್ಥೆ ಜಾರಿಗೊಳಿಸಿ ಮನೆ ಮನೆಗಳಿಂದ ಕಸ ಸಂಗ್ರಹಿಸಲು ಆರಂಭಿಸಿದ ಮೇಲೆ, ನಗರಸಭೆಯ ದ್ವಿತೀಯ ಹಾಗೂ ಪ್ರಥಮ ದರ್ಜೆ ಸಹಾಯಕರು, ಕಂದಾಯ ಅಧಿಕಾರಿಗಳ ಹುದ್ದೆಗಳನ್ನು ಕಡಿತಗೊಳಿಸಿ, ಅವುಗಳ ಬದಲಿಗೆ ಆರೋಗ್ಯ ನಿರೀಕ್ಷಕರು, ಪರಿಸರ ಅಭಿಯಂತರರು ಹುದ್ದೆಗಳನ್ನು ನಗರಸಭೆಗೆ ನೇಮಕ ಮಾಡಿಕೊಳ್ಳಲಾಗುತ್ತಿದೆ ಎಂದರು. ಪ್ರತಿ 700 ಜನಸಂಖ್ಯೆಗೆ ಒಬ್ಬ ಪೌರಕಾರ್ಮಿಕ ಹುದ್ದೆ ಎಂಬ ನಿಯಮ ಬದಲಿಸಿ, 1000 ಜನಸಂಖ್ಯೆಗೆ ಒಬ್ಬ ಪೌರಕಾರ್ಮಿರನ್ನು ನೇಮಕಾತಿ ಮಾಡಿಕೊಳ್ಳಲು ನೇಮಕಾತಿ ಹಾಗೂ ವೃಂದ ನಿಯಮಗಳಲ್ಲಿ ಬದಲಾವಣೆ ತರಲಾಗಿದೆ. ಇದರಿಂದ ಬಹಳಷ್ಟು ಪೌರಕಾರ್ಮಿಕ ಹುದ್ದೆಗಳು ರದ್ದಾದವು. ನಗರಸಭೆಗೆ ವಿವಿಧ ಇಲಾಖೆಗಳಿಂದ ಎರವಲು ಸೇವೆಯ ಮೇಲೆ ಅಧಿಕಾರಿಗಳು ಬರುವುದನ್ನು ತಡೆಯಲಾಗಿದೆ. ಪೌರಕಾರ್ಮಿಕರ ಹೋರಾಟದ ಫಲವಾಗಿ ಸರ್ಕಾರದಿಂದಲೇ ವೇತನ ನೀಡಲಾಗುತ್ತಿದೆ. ಇದರ ಜೊತೆಗೆ ಪೌರ ಕಾರ್ಮಿಕರಿಗೆ ನಗರಸಭೆಯ ಶೇ. 24.5 ಯೋಜನೆಯಡಿ ಜಮೀನು ಖರೀದಿಸಿ ನಿವೇಶನಗಳನ್ನು ಹಂಚುವಂತೆ ಅಧಿಕಾರಿಗಳಲ್ಲಿ ಕೋರಿದರು.

ಅಪರಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಪೌರ ಕಾರ್ಮಿಕರು ಜಗದ ಕೊಳೆ ತೊಳೆಯುವ ಜಲಗಾರರು. ಇಂತಹ ಪೌರಕಾರ್ಮಿಕರ ಮಕ್ಕಳು ಉತ್ತಮ ವಿದ್ಯಾಭ್ಯಾಸ ಹೊಂದಿ ಉನ್ನತ ಹುದ್ದೆಗಳಿಗೆ ಏರುವಂತಾಗಬೇಕು ಎಂದರು.

ಪೌರಕಾರ್ಮಿಕರು ತಮ್ಮ ಆರೋಗ್ಯ ರಕ್ಷಣೆಗೆ ಹೆಚ್ಚಿನ ಒತ್ತು ನೀಡಬೇಕು. ಶೋಷಣೆ ತಪ್ಪಿಸುವ ನಿಟ್ಟಿನಲ್ಲಿ ನೇರ ಪಾವತಿಯಡಿ ಪೌರಕಾರ್ಮಿಕರನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. ಪೌರಕಾರ್ಮಿಕರಿಗೆ ಎಲ್ಲಾ ರೀತಿಯ ಸುರಕ್ಷಾ ಪರಿಕರಗಳನ್ನು ನೀಡಬೇಕು. ನಿಯಮಿತವಾಗಿ ಆರೋಗ್ಯ ತಪಾಸಣೆ ನಡೆಸಬೇಕು. ಉತ್ತಮ ಗುಣಮಟ್ಟದ ಆಹಾರ ನೀಡುವಂತೆ ನಗರಸಭೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪೌರಕಾರ್ಮಿಕರ ಗೃಹಭಾಗ್ಯ ಯೋಜನೆಯಡಿ ಮನೆಗಳನ್ನು ನಿರ್ಮಿಸಲು ಸೂಕ್ತ ಜಾಗ ಮಂಜೂರು ಮಾಡುವುದಾಗಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಭರವಸೆ ನೀಡಿದರು. ಪೌರಾಯುಕ್ತೆ ಎಂ.ರೇಣುಕಾ ಮಾತನಾಡಿ, 2013 ರಿಂದ ಸೆ.23 ರಂದು ಪೌರಕಾರ್ಮಿಕ ದಿನಾಚರಣೆ ಆಚರಿಸುತ್ತಾ ಬರಲಾಗುತ್ತಿದೆ. ನಗರದ ಸಾರ್ವಜನಿಕರು ಪೌರಕಾರ್ಮಿಕರನ್ನು ಗೌರವದಿಂದ ಕಾಣಬೇಕು. ತುಂಬಾ ಕಷ್ಟಪಟ್ಟು ನಗರದ ಸ್ವಚ್ಛತೆಗಾಗಿ ದುಡಿಯುವ ಪೌರಕಾರ್ಮಿರಿಗೆ ಸರ್ಕಾರದಿಂದ ನೆರವು ಹಾಗೂ ಸೌಲಭ್ಯ ನೀಡಲಾಗುತ್ತಿದೆ. ವೇತನದ ಜೊತೆಗೆ ರೂ.2000 ಸಂಕಷ್ಟ ಭತ್ಯೆ, ಭಾನುವಾರವೂ ಕೆಲಸ ನಿರ್ವಹಿಸುವುದರಿಂದ ವಾರ್ಷಿಕ 21 ದಿನಗಳ ವಿಶೇಷ ಭತ್ಯೆ, ಪೌರಕಾರ್ಮಿಕ ದಿನಾಚರಣೆ ಅಂಗವಾಗಿ ರೂ.7000 ಪ್ರೋತ್ಸಾಹಧನ ನೀಡಲಾಗುತ್ತಿದೆ. ಪೌರಕಾರ್ಮಿಕ ಗೃಹ ಭಾಗ್ಯ ಯೋಜನೆಯಡಿ 90 ಮನೆಗಳನ್ನು ನಿರ್ಮಿಸಲು ನಿವೇಶನಗಳನ್ನು ನೀಡಲು ಕ್ರಮ ವಹಿಸುವುದಾಗಿ ಹೇಳಿದರು.

ಪೌರಕಾರ್ಮಿಕ ಸಂಘದ ಅಧ್ಯಕ್ಷ ದುರ್ಗೇಶ್ ಮಾತನಾಡಿ ಚಿತ್ರದುರ್ಗ ನಗರದಲ್ಲಿ 2 ಲಕ್ಷ ಜನಸಂಖ್ಯೆಯಿದೆ. ಇದಕ್ಕೆ ಅನುಗುಣವಾಗಿ ಪೌರಕಾರ್ಮಿಕರ ನೇಮಕಾತಿ ಮಾಡಿಕೊಳ್ಳಬೇಕು. ಕಸ ಸಂಗ್ರಹಣೆ ವಾಹನಗಳ ಸಿಬ್ಬಂದಿ ಕೊರತೆ ನೀಗಿಸಬೇಕು. ಮುಂದಿನ ಒಂದು ವರ್ಷದಲ್ಲಿ ಪೌರಕಾರ್ಮಿಕರಿಗೆ ನಿವೇಶನಗಳನ್ನು ಹಂಚುವ ಕಾರ್ಯ ಮಾಡಬೇಕು ಎಂದರು. ಕಾರ್ಯಕ್ರಮದಲ್ಲಿ ನಿವೃತ್ತಿ ಅಂಚಿನಲ್ಲಿರುವ ಪೌರಕಾರ್ಮಿಕರಾದ ಜಯಣ್ಣ.ಎನ್, ದೇವೆಂದ್ರಪ್ಪ, ನಾಗೇಂದ್ರಪ್ಪ, ಇಸಾಕ್ ಹಾಗೂ ದುರ್ಗೇಶಪ್ಪ, ಆರೋಗ್ಯ ಇಲಾಖೆ ಶುಶ್ರೂಷಕ ಮಲ್ಲಣ್ಣವರನ್ನು ಇದೇ ವೇಳೆ ಸನ್ಮಾನಿಸಲಾಯಿತು. ಪೌರಕಾರ್ಮಿಕರ ಕ್ರೀಡಾಕೂಟದಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ನಗರಸಭೆ ಅಧ್ಯಕ್ಷೆ ಸುಮಿತಾ ರಘು, ಉಪಾಧ್ಯಕ್ಷೆ ಶ್ರೀದೇವಿ, ಸದಸ್ಯರಾದ ಶ್ರೀನಿವಾಸ, ಭಾಗ್ಯಮ್ಮ, ಅನುರಾಧ, ತಾರಕೇಶ್ವರಿ, ನಸರುಲ್ಲಾ, ಸುರೇಶ್, ಶಬ್ಬೀರ್ ಅಹಮದ್, ರಮೇಶಾಚಾರ್, ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ಸೇರಿದಂತೆ ಪೌರಕಾರ್ಮಿಕ ಮುಖ್ಯಸ್ಥರು ಇದ್ದರು.

# ಆಡುಮಲ್ಲೇಶ್ವರ ಕಿರು ಮೃಗಾಲಯದಲ್ಲಿ ಅಕ್ರಮ ಕಾಮಗಾರಿ

» ಚಿತ್ರದುರ್ಗ



ಇಲಾಖೆಯ ಯಾವುದೇ ಆದೇಶವಿಲ್ಲದಿದ್ದರೂ ಆಡುಮಲ್ಲೇಶ್ವರ ಕಿರು ಮೃಗಾಲಯದಲ್ಲಿ ಎಕ್ಸಾಟಿಕ್ ಬರ್ಡ್ಸ್ ಹೌಸ್ ಕಾಮಗಾರಿಯನ್ನು ಕೊಂಡೂರು ನರಸರಾಜು ಹೇಮಂತರಾಜು ಬೆಂಗಳೂರು ಇವರಿಗೆ ಗುತ್ತಿಗೆ ನೀಡಿರುವುದಕ್ಕೆ ಸಂಬಂಧಿಸಿದಂತೆ ವಲಯ ಅರಣ್ಯಾಧಿಕಾರಿ ಅಕ್ಷತಾರವರನ್ನು ಸೇವೆಯಿಂದ ಅಮಾನತ್ತುಗೊಳಿಸಿ ಗುತ್ತಿಗೆದಾರನ ಹೆಸರನ್ನು ಕಪ್ಪುಪಟ್ಟಿಗೆ ಸೇರಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ರಾಜ್ಯ ಸಂಚಾಲಕ ಗುರುಮೂರ್ತಿ ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರ ಗಮನಕ್ಕೂ ತಾರದೆ ಕೊಂಡೂರು ನರಸರಾಜು ಹೇಮಂತರಾಜು ಇವರಿಗೆ ಗುತ್ತಿಗೆ ನೀಡಿರುವುದನ್ನು ಸಮಗ್ರವಾಗಿ ತನಿಖೆಗೊಳಪಡಿಸಬೇಕು. ಎಕ್ಸಾಟಿಕ್ ಬರ್ಡ್ಸ್ ಮನೆ ನಿರ್ಮಾಣ ಕಾಮಗಾರಿಗೆ ದಿನಾಂಕ;24-1-2023 ರಂದು ಈ ಟೆಂಡರ್ ಪೋರ್ಟಲ್ ಮುಖಾಂತರ ಟೆಂಡರ್‌ನಲ್ಲಿ ಗುತ್ತಿಗೆದಾರ ಕೊಂಡೂರು ನರಸರಾಜು ಹೇಮಂತರಾಜು ಇವರು ಸಲ್ಲಿಸಿದ್ದ ದರ ಪಟ್ಟಿ ಅತ್ಯಂತ ಕಡಿಮೆಯಿದ್ದುದರಿಂದ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಸದಸ್ಯ ಕಾರ್ಯದರ್ಶಿ ಕರ್ನಾಟಕ ಮೃಗಾಲಯ ಪ್ರಾಧಿಕಾರ ಕೂರ್ಗಳ್ಳಿ ಮೈಸೂರು ಇವರು ಗುತ್ತಿಗೆದಾರರು ಸಲ್ಲಿಸಿದ್ದ ದರವನ್ನು ಅಂಗೀಕರಿಸಿ ಗುತ್ತಿಗೆದಾರರಿಂದ ಭದ್ರತಾ ಠೇವಣಿ ಹಾಗೂ ಟೆಂಡರ್ ವ್ಯತ್ಯಾಸದ ಮೊತ್ತದ ಎಫ್.ಡಿ.ಆರ್. ಪಡೆದು ದಿನಾಂಕ : 15-5-2023 ರಂದು ಎಕ್ಸಾಟಿಕ್ ಬರ್ಡ್ ಮನೆಯ ಕಾಮಗಾರಿ ಕೈಗೊಳ್ಳಲು ಕರಾರು ಒಪ್ಪಂದ ಮಾಡಿಕೊಂಡು ಕಾಮಗಾರಿ ಅವಧಿ ಪೂರ್ಣಗೊಳಿಸಲು ನೀಡಲಾದ ಅವಧಿ ದಿನಾಂಕ : 13-9-2023 ಕ್ಕೆ ಮುಕ್ತಾಯವಾಗಿದ್ದು, ಗುತ್ತಿಗೆದಾರನ ಕೋರಿಕೆ ಮೇರೆಗೆ ಎರಡು ಬಾರಿ ಅವಧಿಯನ್ನು ವಿಸ್ತರಿಸಿ ಒಟ್ಟು 320 ದಿನಗಳ ಕಾಲಾವಕಾಶ ನೀಡಿದ್ದರೂ ಕೂಡ ಕಾಮಗಾರಿ ಇನ್ನು ಪೂರ್ಣಗೊಂಡಿಲ್ಲ.



**ಚಿತ್ರದುರ್ಗ ನಗರಸಭೆ ಕಾಂಪ್ಲೆಕ್ಸ್‌ನಲ್ಲಿರುವ ಜಿಲ್ಲಾ ಪೌರ ಕಾರ್ಮಿಕರ ಸಂಘದ ಕಚೇರಿಯಲ್ಲಿ ನಿನ್ನೆ ಪೌರ ಕಾರ್ಮಿಕರ ದಿನಾಚರಣೆಯನ್ನು ಆಚರಿಸಲಾಯಿತು. ಐಪಿಡಿ. ಸಾಲಪ್ಪ ಹಾಗೂ ದಲಿತ ಮುಖಂಡ ದಿವಂಗತ ಎಂ.ಜಯಣ್ಣನವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿದರು. ಪೌರ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಡಿ.ದುರುಗೇಶ್, ಪೌರ ಕಾರ್ಮಿಕರ ಸಂಘದ ಉಪಾಧ್ಯಕ್ಷ ಎಸ್.ಜಗದೀಶ್, ಪ್ರಧಾನ ಕಾರ್ಯದರ್ಶಿ ಕೆ.ರಾಜಣ್ಣ, ಶಶಿಧರ್, ಸಿದ್ದಪ್ಪ, ರಂಗಸ್ವಾಮಿ, ಮಂಜಣ್ಣ, ಮರಿಸ್ವಾಮಿ, ನಿಜಲಿಂಗಪ್ಪ, ಹನುಮಂತ, ಎನ್.ಟಿ.ನಾಗರಾಜ್, ಗೋವಿಂದ, ವಸಂತಕುಮಾರ್, ಶಿವು, ರಂಗಪ್ಪ ಆರ್. ಇವರುಗಳು ಈ ಸಂದರ್ಭದಲ್ಲಿದ್ದರು.**

## ಪ್ರಮುಖ ಸುದ್ದಿ

### ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಮಹಾತ್ಮಾ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತಿ; ಅರ್ಥಪೂರ್ಣ ಆಚರಣೆಗೆ ಸಿದ್ಧತೆ

» ಚಿತ್ರದುರ್ಗ



ಅಕ್ಟೋಬರ್ 2 ರಂದು ಜಿಲ್ಲಾ ಕೇಂದ್ರದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತಾ ಕ್ರಮ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಗಾಂಧಿ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಕ್ಟೋಬರ್ 2 ರಂದು ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಹಾಗೂ ಎಲ್ಲ ಶಾಲಾ ಕಾಲೇಜುಗಳಲ್ಲಿ ತಪ್ಪದೇ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಭಾವಚಿತ್ರಗಳಿಗೆ ಗೌರವ ಸಮರ್ಪಿಸುವ ಮೂಲಕ ಜಯಂತಿ ಆಚರಿಸಬೇಕು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆಗೆ ಆಯೋಜಿಸುವ ಜಯಂತಿ ಕಾರ್ಯಕ್ರಮದಲ್ಲಿ ಎಲ್ಲ ಜಿಲ್ಲಾ ಮಟ್ಟದ ಅಧಿಕಾರಿಗಳು ತಪ್ಪದೇ ಭಾಗವಹಿಸಬೇಕು. ಜಯಂತಿ ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ 9 ಗಂಟೆಯಿಂದ 10 ಗಂಟೆಯವರೆಗೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಆವರಣವನ್ನು ಶುಚಿಗೊಳಿಸಲಾಗುವುದು. ಅಧಿಕಾರಿಗಳು ತಪ್ಪದೆ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕೋರಿದರು.

ಶಿಷ್ಟಾಚಾರದ ಅನುಸಾರ ಜಯಂತಿ ಕಾರ್ಯಕ್ರಮದ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ, ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ನಗರಸಭೆ ವತಿಯಿಂದ ಗಾಂಧೀಜಿ ಹಾಗೂ ಶಾಸ್ತ್ರೀಜಿಯವರ ಭಾವಚಿತ್ರಕ್ಕೆ ಅಲಂಕರಿಸುವ ಕಾರ್ಯ ಆಗಬೇಕು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಗಾಂಧೀಜಿಯವರ ಪ್ರಿಯ ಭಜನೆಗಳು ಹಾಗೂ ಗೀತೆಗಳ ಗಾಯನ ಏರ್ಪಾಡು ಮಾಡಬೇಕು. ಶಿಕ್ಷಣ ಇಲಾಖೆಯು ವಿದ್ಯಾರ್ಥಿಗಳಿಂದ ಸರ್ವಧರ್ಮ ಪ್ರಾರ್ಥನೆ ಆಯೋಜಿಸಬೇಕು. ವಾರ್ತಾ ಇಲಾಖೆಯಿಂದ ಜಯಂತಿ ಕಾರ್ಯಕ್ರಮ ಆಯೋಜಿಸಿ, ಗಾಂಧೀಜಿ ಜೀವನ ಸಾಧನೆ ಕುರಿತು ಉಪನ್ಯಾಸಕ್ಕೆ ವ್ಯವಸ್ಥೆ ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚಿಸಿದರು.

**ಸರ್ಕಾರಿ ಕಚೇರಿಗಳ ಸ್ವಚ್ಛತೆಗೆ ನಿರ್ದೇಶನ:** ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಭೇಟಿ ನೀಡಿದಾಗ ಸ್ವಚ್ಛತೆಯ ಬಗ್ಗೆ ಮೂಗು ಮುರಿಯುವ ಪರಿಸ್ಥಿತಿ ಇರಬಾರದು. ಕಚೇರಿಗಳಲ್ಲಿ ಆಹ್ಲಾದಕರ ವಾತಾವರಣವಿರಬೇಕು. ಗಾಂಧೀಜಿಯವರು ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಿದ್ದರು. ಈ ಹಿನ್ನಲೆಯಲ್ಲಿ ಅಧಿಕಾರಿಗಳು ಜಿಲ್ಲಾ ಹಾಗೂ ಅಧೀನ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಸ್ವಚ್ಚತಾ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಭೆಯಲ್ಲಿ ನಿರ್ದೇಶನ ನೀಡಿದರು.

ಗಾಂಧೀಜಿ ಜಯಂತಿ ಅಂಗವಾಗಿ ವಾರ್ತಾ ಇಲಾಖೆಯಿಂದ ಜಿಲ್ಲಾ ಮಟ್ಟದಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಪ್ರೌಢಶಾಲೆ, ಪದವಿಪೂರ್ವ ಹಾಗೂ ಪದವಿ/ಸ್ನಾತಕೋತ್ತರ ಪದವಿ ವಿಭಾಗದಲ್ಲಿ ಪ್ರತ್ಯೇಕವಾಗಿ ಆಯೋಜಿಸಲಾಗಿತ್ತು. ಇದರಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಕಾರ್ಯಕ್ರಮದಲ್ಲಿ ಬಹುಮಾನ ವಿತರಣೆ ಮಾಡಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಪ್ರಥಮ ಸ್ಥಾನ ಪಡೆದ ಪ್ರಬಂಧಗಳನ್ನು ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಗಾಗಿ ಕಳುಹಿಸಿಕೊಡಲಾಗಿದೆ ಎಂದು ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಸಭೆಯಲ್ಲಿ ತಿಳಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T